ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 92 Monday **28-09-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 92 ಸೋಮವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಮುಂಗಾರು ಕೈಕೊಟ್ಟ ಬೆನ್ನಲ್ಲೇ ಹಿಂಗಾರು ಬೆಳೆಗಳತ್ತ ರೈತರ ಚಿತ್ತ

ಭೂಮಿ ಹಸನು ಮಾಡಿಕೊಂಡು ವರುಣನ ಆಗಮನಕ್ಕಾಗಿ ಕಾದು ಕುಳಿತ ಅನ್ನದಾತರು

“ಮುಂಜಾನೆಯ ಮೆರಗು”

ಜಗಳೂರು ಸೆ, 27– ಮುಂಗಾರು ಮಳೆ ಸಂಪೂರ್ಣ ಕೈಕೊಟ್ಟ ಪರಿಣಾಮ ಬೆಳೆ ನಷ್ಟದಿಂದ ಕಂಗಾಲಾಗಿರುವ ತಾಲೂಕಿನ ರೈತರು ಇದೀಗ ಹಿಂಗಾರು ಹಂಗಾಮಿನ ಬಿತ್ತನೆಗೆ ಸಜ್ಜಾಗಿದ್ದು, ಭೂಮಿಯನ್ನು ಹಸನು ಮಾಡಿಕೊಂಡು ಹದ ಮಳೆಯ ನಿರೀಕ್ಷೆಯಲ್ಲಿ ವರುಣನ ಕೃಪೆಗಾಗಿ ಕಾಯುತ್ತಿದ್ದಾರೆ.

ತಾಲೂಕಿನಲ್ಲಿ ಸುಮಾರು 54 ಸಾವಿರ ಹೆಕ್ಟೇರ್ ಬಿತ್ತನೆ ಪ್ರದೇಶವಿದ್ದು, ಬಿಳಿಚೋಡು, ಕಸಬಾ ಹಾಗೂ ಸೊ–ಕ್ಕೆ ಸೇರಿದಂತೆ ವಿವಿಧ ಹೋಬಳಿಗಳಲ್ಲಿ ಹಿಂಗಾರು ಹಂಗಾಮಿನಲ್ಲಿ ಕಡಲೆ, ಜೋಳ ಸೇರಿದಂತೆ ವಿವಿಧ ಬೆಳೆಗಳನ್ನು ಬೆಳೆಯಲಾಗುತ್ತದೆ. ಈ ಭಾಗದಲ್ಲಿ ಸುಮಾರು 5 ಸಾವಿರಕ್ಕೂ ಅಧಿಕ ಹೆಕ್ಟೇರ್ ಪ್ರದೇಶದಲ್ಲಿ ಕಡಲೆ ಮತ್ತು ಜೋಳದಂತಹ ಹಿಂಗಾರು ಬೆಳೆಗಳನ್ನು ಬೆಳೆಯಲು ರೈತರು ಸಿದ್ಧತೆ ನಡೆಸುತ್ತಿದ್ದಾರೆ.

ಆದರೆ, ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಪರಿಣಾಮ ಈಗಾಗಲೇ ಬಿತ್ತನೆ ಮಾಡಿದ್ದ ಬೆಳೆಗಳು ತೀವ್ರ ಹಾನಿಗೊಳಗಾಗಿವೆ. ತಾಲೂಕಿನ ಸುಮಾರು 9 ಸಾವಿರ ಹೆಕ್ಟೇರ್ ಮೆಕ್ಕೆಜೋಳ ಹಾಗೂ 24 ಸಾವಿರ ಹೆಕ್ಟೇರ್ ರಾಗಿ ಬೆಳೆಗಳು



ಹದ ಮಳೆಯಾದ ಬಳಿಕವೇ ಕಡಲೆ ಬಿತ್ತನೆ

ಮುಂಗಾರು ಹಂಗಾಮಿನಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಹಿನ್ನೆಲೆಯಲ್ಲಿ ಹಿಂಗಾರು ಕಡಲೆ ಬಿತ್ತನೆಗೆ ಹದ ಮಳೆಯ ಅವಶ್ಯಕತೆ ಇದೆ. ಉತ್ತಮ ತೇವಾಂಶ ಬಂದ ಬಳಿಕವೇ ರೈತರು ಬಿತ್ತನೆ ಮಾಡಬೇಕು. ಮಳೆಯ ಪರಿಸ್ಥಿತಿ ಗಮನಿಸಿ ಸೂಕ್ತ ಸಮಯದಲ್ಲಿ ಬಿತ್ತನೆ ಕೈಗೊಳ್ಳುವುದು ಅಗತ್ಯವಾಗಿದೆ.
--- ಶ್ವೇತಾ ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ.

ಒಣಗುವ ಹಂತ ತಲುಪಿವೆ. ಇದ–ರಿಂದ ರೈತರು ಬೆಳೆ ಮಾತ್ರವಲ್ಲದೆ ಜಾನುವಾರುಗಳಿಗೆ ಅಗತ್ಯವಾದ ಮೇವಿನ ಕೊರತೆಯನ್ನೂ ಎದುರಿಸುವಂತಾಗಿದೆ.

ಸಾಲ ಮಾಡಿ ಬಿತ್ತಿದ ರೈತರಿಗೆ ಸಂಕಷ್ಟ

ಮುಂಗಾರು ಆರಂಭದಲ್ಲಿ ಉತ್ತಮ ಮಳೆಯ ನಿರೀಕ್ಷೆಯಿಂದ ಅನೇಕ ರೈತರು ಸಾಲ–ಸೂಲ ಮಾಡಿ ಬೀಜ, ಗೊಬ್ಬರ ಹಾಗೂ ಕೃಷಿ ಚಟುವಟಿಕೆಗಳಿಗೆ ಹಣ ವ್ಯಯಿಸಿ ಬಿತ್ತನೆ ಮಾಡಿದ್ದರು. ಆದರೆ ಮಳೆ ಕೈಕೊಟ್ಟ ಹಿನ್ನೆಲೆಯಲ್ಲಿ ನಿರೀಕ್ಷಿತ ಇಳುವರಿ ದೊರೆಯುವ ಸಾಧ್ಯತೆ ಕ್ಷೀಣಿಸಿದ್ದು, ರೈತರ ಮೇಲೆ ಆರ್ಥಿಕ ಹೊರೆ ಹೆಚ್ಚಾಗಿದೆ.

ಬೆಳೆ ಒಣಗುತ್ತಿರುವುದರಿಂದ ಒಂದು ಕಡೆ ಕೃಷಿ ವೆಚ್ಚವೂ ವಾಪಸ್ ಬಾರದ ಪರಿಸ್ಥಿತಿ ನಿರ್ಮಾಣವಾಗಿದ್ದರೆ, ಮತ್ತೊಂದೆಡೆ ಜಾನುವಾರುಗಳಿಗೆ ಅಗತ್ಯವಾದ ಮೇವು ದೊರೆಯದೆ ರೈತರು ಪರದಾಡುವಂತಾಗಿದೆ.

ಭೂಮಿ ಹಸನು ಮಾಡಿಕೊಂಡು ಮಳೆಯತ್ತ ಕಣ್ಣು

ತಾಲೂಕಿನ ದೊಣ್ಣೆಹಳ್ಳಿ, ಕಾಮಗೇತನಹಳ್ಳಿ, ಹಿರೇಮಲ್ಲನಹೊಳೆ, ಚಿಕ್ಕಮಲ್ಲನಹೊಳೆ, ಮುಷ್ಟೂರು, ಉದ್ದಘಟ್ಟ, ಚದರಗೊಳ್ಳ, ಬಿಳಿಚೋಡು ಹೋಬಳಿಯ ಕೆಲವು ಗ್ರಾಮಗಳ ರೈತರು ಈಗಾಗಲೇ ತಮ್ಮ ಜಮೀನುಗಳನ್ನು ಹಸನು ಮಾಡಿಕೊಂಡು ಹಿಂಗಾರು ಬಿತ್ತನೆಗೆ ಸಿದ್ಧತೆ ಮಾಡಿಕೊಂಡಿದ್ದಾರೆ.

ಹಿಂಗಾರು ಬೆಳೆಗಳಿಗೆ ಅಗತ್ಯವಿರುವ ತೇವಾಂಶವನ್ನು ಪಡೆಯಲು ಉತ್ತಮ ಹದ ಮಳೆಯ ಅವಶ್ಯಕತೆ ಇದ್ದು, ಮಳೆ ಬಂದ ಬಳಿಕವೇ ಬಿತ್ತನೆ ಕಾರ್ಯ ಕೈಗೊಳ್ಳಲು ರೈತರು ಮುಂದಾಗಿದ್ದಾರೆ. ಮಳೆ ವಿಳಂಬವಾದರೆ ಬಿತ್ತನೆ ಅವಧಿಯ ಮೇಲೂ ಪರಿಣಾಮ ಬೀರುವ ಆತಂಕ ರೈತರಲ್ಲಿದೆ.

ಕೃಷಿ ಇಲಾಖೆಯಿಂದ ಬೀಜ ವಿತರಣೆಗೆ ಸಿದ್ಧತೆ

ಹಿಂಗಾರು ಹಂಗಾಮಿನ ಹಿನ್ನೆಲೆಯಲ್ಲಿ ಕೃಷಿ ಇಲಾಖೆ ಕೂಡ ಬಿತ್ತನೆ ಬೀಜ



ಹಸಿ ಮಳೆಯ ನಿರೀಕ್ಷೆಯಲ್ಲಿ ರೈತರು

ತಾಲೂಕಿನ ತೊರೆಸಲು ಭಾಗದಲ್ಲಿ ಸಾಮಾನ್ಯವಾಗಿ ಮುಂಗಾರು ಹಂಗಾಮಿನಲ್ಲಿ ಕಡಿಮೆ ಪ್ರಮಾಣದ ಬಿತ್ತನೆ ನಡೆಯುತ್ತದೆ. ಹಿಂಗಾರು ಹಂಗಾಮಿನಲ್ಲಿ ಮುಖ್ಯವಾಗಿ ಕಡಲೆ ಬಿತ್ತನೆ ಮಾಡಲಾಗುತ್ತದೆ. ಹೀಗಾಗಿ ರೈತರು ಈಗಾಗಲೇ ತಮ್ಮ ಜಮೀನುಗಳನ್ನು ಹಸನು ಮಾಡಿಕೊಂಡು ಹಸಿ ಮಳೆಯ ನಿರೀಕ್ಷೆಯಲ್ಲಿ ಕಾಯುತ್ತಿದ್ದಾರೆ. ಉತ್ತಮ ಮಳೆಯಾದರೆ ಹಿಂಗಾರು ಬೆಳೆ ಬೆಳೆಯಲು ಅನುಕೂಲವಾಗಲಿದೆ.
-- ಚಿರಂಜೀವಿ, ತಾಲೂಕು ಅಧ್ಯಕ್ಷ, ರೈತ ಸಂಘದ ಹುಚ್ಚವ್ವನಹಳ್ಳಿ ಮಂಜುನಾಥ್ ಬಣ.

ವಿತರಣೆಗೆ ಸಿದ್ಧತೆ ಮಾಡಿಕೊಳ್ಳುತ್ತಿದೆ. ಹಾಗೂ ತಜ್ಞರ ಸಲಹೆ ಪಡೆದು ರೈತರು ಮಳೆಯ ಪರಿಸ್ಥಿತಿಯನ್ನು ಬಿತ್ತನೆ ಕೈಗೊಳ್ಳುವಂತೆ ಅಧಿಕಾರಿಗಳು ಗಮನದಲ್ಲಿಟ್ಟುಕೊಂಡು ಕೃಷಿ ಇಲಾಖೆ ಸೂಚಿಸಿದ್ದಾರೆ.

ಜೆ ಅಬ್ಬರದ ನಡುವೆ ಲೇಸರ್ ಬೆಳಕು ಮೊಬೈಲ್ ಡಿಸ್‌ಪ್ಲೇ ಹಾನಿ ಆರೋಪ



“ಮುಂಜಾನೆಯ ಮೆರಗು”

ಜಗಳೂರು ಸೆ, 27– ಗಣೇಶ ವಿಸರ್ಜನಾ ಮೆರವಣಿಗೆಯ ವೇಳೆ ಡಿಜೆ ಅಬ್ಬರದೊಂದಿಗೆ ಲೇಸರ್ ಲೈಟ್‌ಗಳ ಪ್ರದರ್ಶನವೂ ಸಾರ್ವಜನಿಕರ ಗಮನ ಸೆಳೆಯಿತು. ಲೇಸರ್ ಬೆಳಕಿನ ಪ್ರತಿಫಲನದಿಂದ ಕೆಲವರ ಮೊಬೈಲ್‌ಗಳ ಡಿಸ್‌ಪ್ಲೇ ಹಾನಿಯಾಗಿದೆ ಎಂಬ ಆರೋಪಗಳು ಕೇಳಿಬಂದವು.

ಶನಿವಾರ ಪಟ್ಟಣದ ತುಮಟಿ ಲೇಔಟ್‌ನಲ್ಲಿ ಪ್ರತಿಷ್ಠಾಪಿಸಲಾಗಿದ್ದ ಬಾಲ್ಯ ಗಣಪತಿಯ ವಿಸರ್ಜನಾ ಮೆರವಣಿಗೆ ಆರಂಭವಾಗುತ್ತಿದ್ದಂತೆ ಯುವಕ–ಯುವತಿಯರು ಡಿಜೆ ಸಂಗೀತಕ್ಕೆ ನೃತ್ಯ ಮಾಡಿದರು. ಡಿಜೆ ಅಬ್ಬರದ ಜೊತೆಗೆ ಲೇಸರ್ ಲೈಟ್‌ಗಳನ್ನು ಬಳಸಲಾಗಿದ್ದು, ಅವುಗಳ ಬೆಳಕು ಸಾರ್ವಜನಿಕರ ಮೊಬೈಲ್‌ಗಳ ಮೇಲೆ ಪ್ರತಿಫಲಿಸಿದ ಸಂದರ್ಭದಲ್ಲಿ ಡಿಸ್ಪ್ಲೇಗೆ ತೊಂದರೆ–ಯಾಗಿದೆ ಎಂದು ಕೆಲವರು ಅಸಮಾಧಾನ ವ್ಯಕ್ತಪಡಿಸಿದರು.

ಹಗಲು ವೇಳೆಯಲ್ಲಿಯೇ ಲೇಸರ್ ಬೆಳಕು ಕಣ್ಣುಗಳಿಗೆ ತೀವ್ರವಾಗಿ ಗೋಚರಿಸುತ್ತಿದ್ದು, ಕೆಲಕಾಲ ಕಣ್ಣು ಮಂಜಾದ ಅನುಭವವಾಯಿತು ಎಂದು ಸಾರ್ವಜನಿಕರು ತಿಳಿಸಿದ್ದಾರೆ.

ನಾಲ್ಕು ಬಾಕ್ಸ್‌ಗಳನ್ನು ಅಳವಡಿಸಲಾಗಿದ್ದರೂ ಧ್ವನಿಯ ಪ್ರಮಾಣ ಹೆಚ್ಚಾಗಿದ್ದರಿಂದ ಸುಮಾರು ಎರಡು ಕಿ.ಮೀ. ವ್ಯಾಪ್ತಿಯವರೆಗೂ ಡಿಜೆ ಶಬ್ದ ಕೇಳಿಬಂದಿತು ಎಂದು ಸ್ಥಳೀಯರು ದೂರಿದರು. ಇದ–ರಿಂದ ಮನೆಗಳಲ್ಲಿದ್ದ ಚಿಕ್ಕ ಮಕ್ಕಳು, ವೃದ್ಧರು ಹಾಗೂ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರು ತೊಂದರೆ ಅನುಭವಿಸಿದರು ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದರು.

60ಕ್ಕೂ ಅಧಿಕ ಪೊಲೀಸ್ ಸಿಬ್ಬಂದಿ ನಿಯೋಜನೆ

ಗಣೇಶ ವಿಸರ್ಜನಾ ಮೆರವಣಿಗೆಗಳ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ 60ಕ್ಕೂ ಅಧಿಕ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ಒಟ್ಟಾರೆ 196ಕ್ಕೂ ಅಧಿಕ ಗಣೇಶ ಮೂರ್ತಿಗಳ ವಿಸರ್ಜನಾ ಕಾರ್ಯವು ಯಾವುದೇ ಅಹಿತಕರ ಘಟನೆಗಳಿಲ್ಲದೆ ಸರಾಗವಾಗಿ ನಡೆದಿತ್ತು.

ಈ ಕುರಿತು ಸಿಪಿಐ ಸಿದ್ರಾಮಯ್ಯ ಮಾತನಾಡಿ, ನಿಯಮದ ಪ್ರಕಾರ ನಾಲ್ಕು ಬಾಕ್ಸ್‌ಗಳನ್ನು ಅಳವಡಿಸಲು ಅವಕಾಶ ನೀಡಲಾಗಿತ್ತು. ಧ್ವನಿಯ ಪ್ರಮಾಣವನ್ನು ಕಡಿಮೆ ಮಾಡುವಂತೆ ಆಯೋಜಕರಿಗೆ ಸೂಚನೆ ನೀಡಲಾಗಿತ್ತು ಎಂದು ಮಾಹಿತಿ ನೀಡಿದರು.

ಆದರೆ, ಒಂದೇ ಮೆರವಣಿಗೆಯಲ್ಲಿ ಅತ್ಯಧಿಕ ಶಬ್ದದ ಸೌಂಡ್ ಸಿಸ್ಟಂ ಬಳಸಲು ಅವಕಾಶ ನೀಡಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಸಾಮಾಜಿಕ ಹೋರಾಟಗಾರ ರಾಘವನ್ ದೂರಿದರು. ಕಾನೂನು ಮತ್ತು ನಿಯಮಗಳು ಎಲ್ಲರಿಗೂ ಒಂದೇ ರೀತಿಯಲ್ಲಿ ಅನ್ವಯವಾಗಬೇಕು. ಮುಂದಿನ ದಿನಗಳಲ್ಲಿ ಇಂತಹ ಮೆರವಣಿಗೆಗಳಲ್ಲಿ ಧ್ವನಿಮಾಲಿನ್ಯ ಹಾಗೂ ಲೇಸರ್ ಬೆಳಕಿನ ಬಳಕೆಯ ಬಗ್ಗೆ ಕಟ್ಟುನಿಟ್ಟಿನ ನಿಯಂತ್ರಣ ಇರಬೇಕು ಎಂದು ಅವರು ಒತ್ತಾಯಿಸಿದರು.

ಕುಡಿಯುವ ನೀರಿಗಾಗಿ ಅಧಿಕಾರಿಗಳಿಗೆ ದಿಗ್ಬಂಧನ!

ಮೋಟಾರ್–ಪಂಪ್ ದುರಸ್ತಿಗೆ ನಿರ್ಲಕ್ಷ್ಯ ಆರೋಪ; ಇಒ ಭರವಸೆ ಬಳಿಕ ಅಧಿಕಾರಿಗಳ ಬಿಡುಗಡೆ

“ಮುಂಜಾನೆಯ ಮೆರಗು”

ಜಗಳೂರು, ಸೆ.27– ತಾಲೂಕಿನ ದಿದ್ದಿಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಉಜ್ಜಪ್ಪಒಡೆಯರಹಳ್ಳಿ ಗ್ರಾಮದಲ್ಲಿ ಉಲ್ಬಣಗೊಂಡಿರುವ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುವಂತೆ ಒತ್ತಾಯಿಸಿ ಗ್ರಾಮಸ್ಥರು ಶನಿವಾರ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಹಾಗೂ ಸಿಬ್ಬಂದಿಗೆ ದಿಗ್ಬಂಧನ ಹಾಕಿದ ಘಟನೆ ನಡೆಯಿತು.

ಗ್ರಾಮದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಸಮರ್ಪಕವಾಗಿ ನಿರ್ವಹಿಸುವಲ್ಲಿ ಗ್ರಾಮ ಪಂಚಾಯಿತಿ ಅಧಿಕಾರಿಗಳು ವಿಫಲರಾಗಿದ್ದಾರೆ ಎಂದು ಆರೋಪಿಸಿದ ಗ್ರಾಮಸ್ಥರು, “ಸಮಸ್ಯೆ ಬಗೆಹರಿಯುವವರೆಗೆ ಹಾಗೂ ಪಿಡಿಒ ಸ್ಥಳಕ್ಕೆ ಬರುವವರೆಗೆ ಅಧಿಕಾರಿಗಳನ್ನು ಇಲ್ಲಿಂದ ತೆರಳಲು ಬಿಡುವುದಿಲ್ಲ” ಎಂದು ಪಟ್ಟುಹಿಡಿದರು.

ಏಳು ಬೋರ್‌ವೆಲ್‌ಗಳಿದ್ದರೂ ನೀರಿನ ಸಮಸ್ಯೆ

ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಅವರ ಎದುರು ಗ್ರಾಮಸ್ಥರು ತಮ್ಮ ಸಮಸ್ಯೆಗಳನ್ನು ವಿವರಿಸಿದರು.

ಗ್ರಾಮದ ದರ್ಶನ್ ಪಾಟೀಲ್ ಮಾತನಾಡಿ, ಗ್ರಾಮದಲ್ಲಿ ಏಳು ಬೋರ್‌ವೆಲ್‌ಗಳಿದ್ದು, ಅವುಗಳಲ್ಲಿ ನೀರಿನ ಲಭ್ಯತೆ ಇದೆ. ಆದರೆ ಮೋಟಾರ್ ಹಾಗೂ ಪಂಪ್‌ಸೆಟ್‌ಗಳು ಪದೇಪದೇ ಸುಟ್ಟುಹೋಗುತ್ತಿದ್ದು, ಅವುಗಳನ್ನು ದುರಸ್ತಿ ಮಾಡಿ ಪುನಃ ಅಳವಡಿಸುವಂತೆ ಗ್ರಾಮ



ಪಂಚಾಯಿತಿ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಸ್ಪಂದನೆ ದೊರೆಯುತ್ತಿಲ್ಲ ಎಂದು ದೂರಿದರು.

“ಬೋರ್‌ವೆಲ್‌ನಲ್ಲಿ ನೀರಿದ್ದರೂ ಮೋಟಾರ್ ಮತ್ತು ಪಂಪ್‌ಸೆಟ್‌ಗಳ ದುರಸ್ತಿಯಾಗದ ಕಾರಣ ಗ್ರಾಮಸ್ಥರು ಕುಡಿಯುವ ನೀರಿಗಾಗಿ ಪರದಾಡುವಂತಾಗಿದೆ. ದಿನದಿಂದ ದಿನಕ್ಕೆ ಸಮಸ್ಯೆ ಗಂಭೀರವಾಗುತ್ತಿದೆ. ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳಬೇಕು” ಎಂದು ಒತ್ತಾಯಿಸಿದರು.

ಗ್ರಾಮದ ಸಿದ್ದಪ್ಪ ಮಾತನಾಡಿ, ನೀರಿನ ಮೂಲವಿದ್ದರೂ ಅದನ್ನು ಜನರಿಗೆ ತಲುಪಿಸುವ ವ್ಯವಸ್ಥೆ ಸರಿಪಡಿಸುವಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇಒ ಭರವಸೆ ಬಳಿಕ ದಿಗ್ಬಂಧನ ತೆರವು

ಗ್ರಾಮಸ್ಥರ ಅಹವಾಲು ಆಲಿಸಿದ ಇಒ ಕೆಂಚಪ್ಪ ಅವರು, “ನಾಳೆ ಬೆಳಗ್ಗೆಯೊಳಗೆ ಸಮಸ್ಯೆ ಬಗೆಹರಿಸಿ ಗ್ರಾಮದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗುವುದು” ಎಂದು ಭರವಸೆ ನೀಡಿದರು.

ಅಧಿಕಾರಿಗಳಿಂದ ಸ್ಪಷ್ಟ ಭರವಸೆ ದೊ–ರೆತ ಬಳಿಕ ಗ್ರಾಮಸ್ಥರು ದಿಗ್ಬಂಧನವನ್ನು ತೆರವುಗೊಳಿಸಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಹಾಗೂ ಸಿಬ್ಬಂದಿಗೆ ಸ್ಥಳದಿಂದ ತೆರಳಲು ಅವಕಾಶ ಮಾಡಿಕೊಟ್ಟರು.

ನೀರಿನ ಮೂಲವಿದ್ದರೂ ನಿರ್ವಹಣಾ ವೈಫಲ್ಯದಿಂದ ಗ್ರಾಮಸ್ಥರು ಸಂಕಷ್ಟಕ್ಕೆ ಸಿಲುಕಿರುವ ಆರೋಪ ಕೇಳಿಬಂದಿದ್ದು, ಇಒ ನೀಡಿರುವ ಭರವಸೆ ಎಷ್ಟರ ಮಟ್ಟಿಗೆ ಕಾರ್ಯರೂಪಕ್ಕೆ ಬರುತ್ತದೆ ಎಂಬುದನ್ನು ಗ್ರಾಮಸ್ಥರು ಎದುರು ನೋಡುತ್ತಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮಸ್ಥರಾದ ಬಸವರಾಜ್ ಪಾಟೀಲ್, ಯಶವಂತ್, ರಾಜಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರಿಗೆ ಅಭಿನಂದನೆ

“ಮುಂಜಾನೆಯ ಮೆರಗು”

ಜಗಳೂರು ಸೆ, 27– ತಾಲೂಕಿನಲ್ಲಿ ಕುರುಬ ಸಮಾಜದ ಜನರನ್ನು ಗುರುತಿಸಿ, ಜಿಲ್ಲಾ ಮಟ್ಟದಲ್ಲಿ ಸಮಾಜಕ್ಕೆ ಸಾಮಾಜಿಕ ನ್ಯಾಯ ಹಾಗೂ ಸೂಕ್ತ ಪ್ರಾತಿನಿಧ್ಯ ದೊರಕಿಸಲು ಶ್ರಮಿಸಿದ ಜನಪ್ರಿಯ ಮಾಜಿ ಶಾಸಕರಾದ ಎಸ್.ವಿ. ರಾಮಚಂದ್ರ ಅವರಿಗೆ ಸಮಾಜದ ಮುಖಂಡರು ಹಾಗೂ ಅಭಿಮಾನಿಗಳ ವತಿಯಿಂದ ಅಭಿನಂದನೆ ಸಲ್ಲಿಸಲಾಯಿತು.

ದಾವಣಗೆರೆ ಜಿಲ್ಲೆಯ ರಾಜಕೀಯ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಹಲವು ವರ್ಷಗಳಿಂದ ಸಕ್ರಿಯವಾಗಿ ಸೇವೆ ಸಲ್ಲಿಸಿರುವ ಎಸ್.ವಿ. ರಾಮಚಂದ್ರ ಅವರು, ಜಗಳೂರು ವಿಧಾನಸಭಾ ಕ್ಷೇತ್ರದಿಂದ ಮೂರು ಬಾರಿ ಶಾಸಕರಾಗಿ ಆಯ್ಕೆಯಾಗಿ ಜನರ ಸೇವೆಗೆ ತಮ್ಮನ್ನು ಸಮರ್ಪಿಸಿಕೊಂಡಿದ್ದಾರೆ. ಕ್ಷೇತ್ರದ ಅಭಿವೃದ್ಧಿ ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸುವ



ಮೂಲಕ ಸಾರ್ವಜನಿಕ ಜೀವನದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ.

ಹಟ್ಟಿಚಿನ್ನದ ಗಣಿ ನಿಗಮದ ಮಾಜಿ ಅಧ್ಯಕ್ಷರಾಗಿ, ಬಿಜೆಪಿ ಮೋರ್ಚಾದ ಮಾಜಿ ರಾಷ್ಟ್ರೀಯ ಉಪಾಧ್ಯಕ್ಷರಾಗಿ ಸೇರಿದಂತೆ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸಿರುವ ಅವರು, ಸರಳತೆ, ಸಜ್ಜನಿಕೆ ಹಾಗೂ ಜನಸಂಪರ್ಕಕ್ಕೆ ಹೆಸರಾಗಿದ್ದಾರೆ ಎಂದು ಸಮಾಜದ ಮುಖಂಡರು ಅಭಿಪ್ರಾಯ ವ್ಯಕ್ತಪಡಿಸಿದರು.

ಸಮಾಜದ ಜನರ ಸಮಸ್ಯೆಗಳಿಗೆ ಧ್ವನಿಯಾಗಿ, ಸಾಮಾಜಿಕ ನ್ಯಾಯದ ಆಶಯದೊಂದಿಗೆ ಕೆಲಸ ಮಾಡಿರುವ ಎಸ್.ವಿ. ರಾಮಚಂದ್ರ ಅವರ ಸಾರ್ವಜನಿಕ ಸೇವೆಯನ್ನು ಸ್ಮರಿಸಿದ ಮುಖಂಡರು, ಅವರ ಮುಂದಿನ ರಾಜಕೀಯ ಹಾಗೂ ಸಾಮಾಜಿಕ ಜೀವನಕ್ಕೂ ಶುಭ ಹಾರೈಸಿದರು.

ಈ ಹಿನ್ನೆಲೆಯಲ್ಲಿ ದಾವಣಗೆರೆಯಲ್ಲಿರುವ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರ ನಿವಾಸದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರು, ಅಭಿಮಾನಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿ ಅವರಿಗೆ ಗೌರವ ಸಲ್ಲಿಸಿ ಅಭಿನಂದನೆಗಳನ್ನು ಅರ್ಪಿಸಿದರು.

Editor, Publisher & Owner of the News Paper: RAVIKUMARA J.O, MUNJANEYA MERAGU, JCR BADAVANE, Jagalur- 577-528, Davanagere (D)Karnataka, Printed by: MALLIKARJUNAPPA H G. Printed at: SHIVA MEDIA HOUSE, No.900/A2, Opp-Banashankari Temple Arch, Main Roan, Davanagere, Karnataka-577004.

ಕಂಬತ್ತಹಳ್ಳಿಯಲ್ಲಿ ಬಸವ ತತ್ವದ ಮಹಾಬೆಳಗು

ಚನ್ನಬಸವ ಶಿವಯೋಗಿಗಳ ಸ್ಮರಣೋತ್ಸವ ಹಾಗೂ ಬಸವ ತತ್ವ ಸಮ್ಮೇಳನ ಭಕ್ತಿಭಾವದಿಂದ ಆಚರಣೆ





"ಮುಂಜಾನೆಯ ಮೆರಗು"

ಜಗಳೂರು, ಸೆ.27– ತಾಲೂಕಿನ ಕಂಬತ್ತಹಳ್ಳಿ ಗ್ರಾಮದಲ್ಲಿ ಬಸವ ತತ್ವದ ಮಹಾಬೆಳಗು ಕಾರ್ಯಕ್ರಮದ ಅಂಗವಾಗಿ ಲಿಂಗೈಕ್ಯ ಶ್ರೀ ಚನ್ನಬಸವ ಶಿವಯೋಗಿಗಳ ಸ್ಮರಣೋತ್ಸವ ಹಾಗೂ ಬಸವ ತತ್ವ ಸಮ್ಮೇಳನವು ಭಕ್ತಿ, ಶ್ರದ್ಧೆ ಹಾಗೂ ಆಧ್ಯಾತ್ಮಿಕ ವಾತಾವರಣದಲ್ಲಿ ಜರುಗಿತು.

ಕಾರ್ಯಕ್ರಮದಲ್ಲಿ ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ. ದೇವೇಂದ್ರಪ್ಪ ಅವರು ಭಾಗವಹಿಸಿ ಲಿಂಗೈಕ್ಯ ಶ್ರೀ ಚನ್ನಬಸವ ಶಿವಯೋಗಿಗಳ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಿದರು. ಇದೇ ಸಂದರ್ಭದಲ್ಲಿ ವಿವಿಧ ಮಠಗಳ ಪೂಜ್ಯ ಶ್ರೀಗಳ ಆಶೀರ್ವಾದ ಪಡೆದುಕೊಂಡರು.

ಬಳಿಕ ಬಸವ ತತ್ವ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಶಾಸಕ ಬಿ. ದೇವೇಂದ್ರಪ್ಪ ಅವರು, ಬಸವಣ್ಣನವರು ಪ್ರತಿಪಾದಿಸಿದ ಕಾಯಕ, ದಾಸೋಹ, ಸಮಾನತೆ ಮತ್ತು ಮಾನವೀಯತೆಯ ತತ್ವಗಳು ಇಂದಿನ ಸಮಾಜಕ್ಕೂ ದಾರಿದೀಪವಾಗಿವೆ ಎಂದು ಹೇಳಿದರು.

ಬಸವ ತತ್ವವು ಕೇವಲ ಧಾರ್ಮಿಕ ಚಿಂತನೆಗೆ ಸೀಮಿತವಾಗಿಲ್ಲ. ಅದು ಪ್ರತಿಯೊಬ್ಬ ಮನುಷ್ಯನಿಗೂ ಸಮಾನ ಗೌರವ, ಸ್ವಾಭಿಮಾನ ಹಾಗೂ ಸಾಮಾಜಿಕ ಜವಾಬ್ದಾರಿಯ ಬದುಕನ್ನು ಕಲಿಸುವ ಮಹತ್ವದ ಜೀವನದರ್ಶನವಾಗಿದೆ. ಸಮಾಜದಲ್ಲಿರುವ ಅಸಮಾನತೆಗಳನ್ನು ತೊಡೆದುಹಾಕಿ ಎಲ್ಲರೂ ಸಮಾನತೆಯಿಂದ ಬದುಕುವ ವಾತಾವರಣ ನಿರ್ಮಿಸುವುದು ಬಸವಣ್ಣನವರ ಆಶಯವಾಗಿತ್ತು ಎಂದು ತಿಳಿಸಿದರು.

'ಕಾಯಕವೇ ಕೈಲಾಸ' ಎಂಬ ಬಸವಣ್ಣನವರ ಸಂದೇಶವನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಯಾವುದೇ ದುಡಿಮೆಯಾಗಿರಲಿ ಅದಕ್ಕೆ ಗೌರವ ನೀಡಬೇಕು. ಪ್ರಾಮಾಣಿಕವಾಗಿ ದುಡಿಯುವುದು, ಗಳಿಸಿದುದರಲ್ಲಿ ಸಮಾಜದ ಅಗತ್ಯವಿರುವವರಿಗೆ ನೆರವಾಗುವುದು ಹಾಗೂ ದಾಸೋಹದ ಮನೋಭಾವ ಬೆಳೆಸಿಕೊಳ್ಳುವುದೇ ಬಸವ ತತ್ವದ ನಿಜವಾದ ಅನುಷ್ಠಾನವಾಗಿದೆ ಎಂದು ಹೇಳಿದರು.

ಯುವಜನರಿಗೆ ಬಸವ ತತ್ವದ ಅರಿವು ಅಗತ್ಯ

ಇಂದಿನ ಯುವಜನತೆ ಬಸವಣ್ಣನವರ ವಚನಗಳು ಹಾಗೂ ಅವರ ಸಾಮಾಜಿಕ ಚಿಂತನೆಗಳನ್ನು ಅರಿತುಕೊಳ್ಳಬೇಕು. ವಚನ ಸಾಹಿತ್ಯದಲ್ಲಿ ಅಡಗಿರುವ ಸರಳ ಜೀವನ, ಸತ್ಯ, ಕಾಯಕ, ಸಮಾನತೆ ಮತ್ತು ಮಾನವೀಯತೆಯ ಸಂದೇಶಗಳನ್ನು ಅರ್ಥೈಸಿಕೊಂಡು ಸಮಾಜ ನಿರ್ಮಾಣದಲ್ಲಿ ಯುವಕರು ಪ್ರಮುಖ ಪಾತ್ರ ವಹಿಸಬೇಕು ಎಂದು ಶಾಸಕ ದೇವೇಂದ್ರಪ್ಪ ಕರೆ ನೀಡಿದರು.

ಲಿಂಗೈಕ್ಯ ಶ್ರೀ ಚನ್ನಬಸವ ಶಿವಯೋಗಿಗಳ ಸ್ಮರಣೋತ್ಸವದ ಕುರಿತು ಮಾತನಾಡಿದ ಅವರು, ಧಾರ್ಮಿಕ ಹಾಗೂ ಆಧ್ಯಾತ್ಮಿಕ ಕ್ಷೇತ್ರದಲ್ಲಿ ಶ್ರೀಗಳು ಸಲ್ಲಿಸಿರುವ ಸೇವೆಯನ್ನು ಸ್ಮರಿಸುವುದು ಸಮಾಜದ ಕರ್ತವ್ಯವಾಗಿದೆ. ಇಂತಹ ಸ್ಮರಣೋತ್ಸವಗಳು ಕೇವಲ ನೆನಪಿನ ಕಾರ್ಯಕ್ರಮಗಳಾಗದೆ, ಅವರ ಆದರ್ಶಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ವೇದಿಕೆಗಳಾಗಬೇಕು ಎಂದರು.

ವಚನ ಸಾಹಿತ್ಯ, ಕಾಯಕ–ದಾಸೋಹದ ಕುರಿತು ಚಿಂತನೆ

ಸಮ್ಮೇಳನದಲ್ಲಿ ಬಸವ ತತ್ವ, ವಚನ ಸಾಹಿತ್ಯ, ಕಾಯಕ–ದಾಸೋಹದ ಮಹತ್ವ, ಸಾಮಾಜಿಕ ಸಮಾನತೆ, ಮಾನವೀಯ ಮೌಲ್ಯಗಳು ಹಾಗೂ ಸೌಹಾರ್ದ ಬದುಕಿನ ಕುರಿತು ಪೂಜ್ಯ ಶ್ರೀಗಳು ಹಾಗೂ ಗಣ್ಯರು ಚಿಂತನೆಗಳನ್ನು ಹಂಚಿಕೊಂಡರು.

ವಿವಿಧ ಮಠಗಳ ಪೂಜ್ಯ ಶ್ರೀಗಳ ಆಶೀರ್ವಚನ, ಪ್ರವಚನ ಹಾಗೂ ಆಧ್ಯಾತ್ಮಿಕ ಸಂದೇಶಗಳು ಭಕ್ತರ ಗಮನ ಸೆಳೆದವು. ಬಸವಣ್ಣನವರ ವಚನಗಳ ಮೂಲಕ ಸಮಾಜದಲ್ಲಿ ಪ್ರೀತಿ, ಸಹಬಾಳ್ವೆ, ಸಮಾನತೆ ಹಾಗೂ ಪರಸ್ಪರ ಗೌರವದ ಬದುಕು ಕಟ್ಟಿಕೊಳ್ಳುವ ಅಗತ್ಯವನ್ನು ಕಾರ್ಯಕ್ರಮದಲ್ಲಿ ಒತ್ತಿ ಹೇಳಲಾಯಿತು.

ಕಾರ್ಯಕ್ರಮದಲ್ಲಿ ಸಾಣೇಹಳ್ಳಿ ಬೃಹನ್ಮಠದ ಪೂಜ್ಯ ಶ್ರೀಗಳು ಸೇರಿದಂತೆ ವಿವಿಧ ಮಠಗಳ ಪೂಜ್ಯರು, ಧಾರ್ಮಿಕ ಮುಖಂಡರು, ಗಣ್ಯರು, ಗ್ರಾಮಸ್ಥರು ಹಾಗೂ ಸದ್ಭಕ್ತರು ಭಾಗವಹಿಸಿದ್ದರು. ಕಂಬತ್ತಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಭಕ್ತಿಗೀತೆ, ಪ್ರವಚನ, ಪೂಜಾ ಕಾರ್ಯಕ್ರಮ ಹಾಗೂ ಬಸವ ತತ್ವದ ಸಂದೇಶಗಳಿಂದ ಕಂಬತ್ತಹಳ್ಳಿ ಗ್ರಾಮದಲ್ಲಿ ದಿನವಿಡೀ ಆಧ್ಯಾತ್ಮಿಕ ವಾತಾವರಣ ನಿರ್ಮಾಣವಾಗಿತ್ತು.

ಒಟ್ಟಾರೆ, ಲಿಂಗೈಕ್ಯ ಶ್ರೀ ಚನ್ನಬಸವ ಶಿವಯೋಗಿಗಳ ಸ್ಮರಣೆಯೊಂದಿಗೆ ಬಸವಣ್ಣನವರ ಕಾಯಕ, ದಾಸೋಹ, ಸಮಾನತೆ ಮತ್ತು ಮಾನವೀಯತೆಯ ಸಂದೇಶವನ್ನು ಜನಮನಕ್ಕೆ ತಲುಪಿಸಿದ 'ಬಸವ ತತ್ವದ ಮಹಾಬೆಳಗು' ಕಾರ್ಯಕ್ರಮವು ಗಮನ ಸೆಳೆಯಿತು.

ದಸರಾ ಮಾದರಿಯಲ್ಲಿ ಹಾಸನಾಂಬ ಜಾತ್ರೆ ಆಚರಣೆ : ಸಚಿವ ಶಿವಲಿಂಗೇಗೌಡ

"ಮುಂಜಾನೆಯ ಮೆರಗು"

ಹಾಸನ, ಸೆ.27– ಹಾಸನಾಂಬ ದೇವಿಯ ದರ್ಶನೋತ್ಸವ ಹಾಗೂ ಶ್ರೀ ಸಿದ್ಧೇಶ್ವರ ಸ್ವಾಮಿ ಜಾತ್ರಾಮಹೋತ್ಸವವನ್ನು ಈ ಬಾರಿ ಕೇವಲ ಧಾರ್ಮಿಕ ಕಾರ್ಯಕ್ರಮಕ್ಕೆ ಸೀಮಿತಗೊಳಿಸದೆ, ಹಾಸನ ಜಿಲ್ಲೆಯ ಹಬ್ಬ ಎಂಬ ಪರಿಕಲ್ಪನೆಯಲ್ಲಿ ದಸರಾ ಮಾದರಿಯಲ್ಲಿ ಆಚರಿಸಲು ಚಿಂತನೆ ನಡೆಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಹೇಳಿದರು.

ಹಾಸನಾಂಬ ಜಾತ್ರೆಯ ಪೂರ್ವಭಾವಿ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಅ.29ರಿಂದ ನ.11ರವರೆಗೆ ಜಾತ್ರಾಮಹೋತ್ಸವ ನಡೆಯಲಿದ್ದು, ಅ.30ರಿಂದ ನ.10ರವರೆಗೆ ಸಾರ್ವಜನಿಕರಿಗೆ ದೇವಿಯ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ರಾಜ್ಯದ ವಿವಿಧ ಭಾಗಗಳಿಂದ ಲಕ್ಷಾಂತರ ಭಕ್ತರು ಆಗಮಿಸುವ ಹಿನ್ನೆಲೆಯಲ್ಲಿ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಭಕ್ತರಿಗೆ ಸುಗಮ ದರ್ಶನ ಹಾಗೂ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು ಎಂದರು.

ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳ ಸ್ಥಳೀಯ ಕಲಾವಿದರು, ಜಾನಪದ ಕಲಾ ತಂಡಗಳು ಹಾಗೂ ಕ್ರೀಡಾ ಪ್ರತಿಭೆಗಳಿಗೆ ಜಾತ್ರೆಯಲ್ಲಿ ವೇದಿಕೆ ಕಲ್ಪಿಸಲಾಗುವುದು. ಸೋಬಾನೆ ಹಾಡು, ರಂಗಗೀತೆ, ನಾಟಕ, ಜಾನಪದ ಕಲೆ, ಚಿತ್ರಕಲೆ ಹಾಗೂ ರಂಗೋಲಿ ಸ್ಪರ್ಧೆಗಳಿಗೆ ಆದ್ಯತೆ ನೀಡುವ ಕುರಿತು ಚಿಂತನೆ ನಡೆದಿದೆ. ಕನಕಪುರದ ಕನಕೋತ್ಸವದ ಮಾದರಿಯಲ್ಲಿ ಸ್ಥಳೀಯ ಪ್ರತಿಭೆಗಳಿಗೆ ಹೆಚ್ಚಿನ ಅವಕಾಶ ನೀಡಲಾಗುವುದು ಎಂದು ತಿಳಿಸಿದರು.

ಎತ್ತುಗಳ ಪ್ರದರ್ಶನಕ್ಕೂ ಅವಕಾಶ: ಹಾಸನ ಜಿಲ್ಲೆಯ ಗ್ರಾಮೀಣ ಪರಂಪರೆಯನ್ನು ಪರಿಚಯಿಸುವ ಉದ್ದೇಶದಿಂದ ಉತ್ತಮ ತಳಿಯ ಎತ್ತು, ಹಸು ಹಾಗೂ ಜಾನುವಾರುಗಳ ಪ್ರದರ್ಶನ ಏರ್ಪಡಿಸಿ, ರೈತರಿಗೆ ಬಹುಮಾನ ಹಾಗೂ ಪ್ರಮಾಣಪತ್ರ ನೀಡುವ ಕುರಿತು ಚಿಂತನೆ ನಡೆದಿದೆ. ಬಾಣವಾರ ಭಾಗದ ಎತ್ತಿನ ಓಟ ಸೇರಿದಂತೆ ಗ್ರಾಮೀಣ ಕ್ರೀಡೆಗಳಿಗೂ ಅವಕಾಶ ಕಲ್ಪಿಸುವ ಸಾಧ್ಯತೆ ಪರಿಶೀಲಿಸಲಾಗುವುದು ಎಂದರು.

ಕ್ರಿಕೆಟ್ ಸೇರಿದಂತೆ ವಿವಿಧ ಕ್ರೀಡಾಕೂಟಗಳನ್ನು ಆಯೋಜಿಸಿ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಲಾಗುವುದು. ಹಾಸನಾಂಬ ದೇವಿಯ ಚಿತ್ರವಿರುವ ಸ್ಮರಣಿಕೆಗಳನ್ನು ಸ್ಪರ್ಧಾಳುಗಳಿಗೆ ನೀಡುವ ಬಗ್ಗೆಯೂ ಚರ್ಚಿಸಲಾಗಿದೆ ಎಂದು ಹೇಳಿದರು.

ಗುಣಮಟ್ಟದ ವ್ಯವಸ್ಥೆಗೆ ಆದ್ಯತೆ: ಜಾತ್ರೆಯ ವಿವಿಧ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯಲ್ಲಿ ಸಂಪೂರ್ಣ ಪಾರದರ್ಶಕತೆ ಇರಬೇಕು. ದೇವರ ಹಣದ ದುರುಪಯೋಗ ಅಥವಾ ಅನಗತ್ಯ ದುಂದುವೆಚ್ಚಕ್ಕೆ ಯಾವುದೇ ಕಾರಣಕ್ಕೂ ಅವಕಾಶ ನೀಡುವುದಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು. ಸಿಸಿ ಕ್ಯಾಮೆರಾಗಳನ್ನು ಬಾಡಿಗೆಗೆ ಪಡೆಯುವ ಬದಲು ಶಾಶ್ವತವಾಗಿ ಅಳವಡಿಸುವ ಸಾಧ್ಯತೆಯನ್ನೂ ಪರಿಶೀಲಿಸಲಾಗುವುದು ಎಂದರು.

ಶಾಸಕ ಎಚ್.ಎಸ್. ಪ್ರಕಾಶ್ ಮಾತನಾಡಿ, ಕಳೆದ ವರ್ಷ ಲಕ್ಷಾಂತರ ಭಕ್ತರು ಆಗಮಿಸಿದರೂ ಯಾವುದೇ ಅನಾಹುತವಾಗದಂತೆ ವ್ಯವಸ್ಥೆ ಮಾಡಲಾಗಿತ್ತು. ಈ ಬಾರಿಯೂ ಅಧಿಕಾರಿಗಳು ತಮ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದರು. ವೃದ್ಧರು, ಅಂಗವಿಕಲರು ಹಾಗೂ ತಾಯಿಮಕ್ಕಳಿಗೆ ಪ್ರತ್ಯೇಕ ಸಾಲಿನ ವ್ಯವಸ್ಥೆ ಕಲ್ಪಿಸುವಂತೆ ಸಾರ್ವಜನಿಕರು ಸಲಹೆ ನೀಡಿದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾ ಕುಮಾರಿ, ಜಿಪಂ ಸಿಇಒ ಶುಭಂ ಶುಕ್ಲ, ಎಸ್ಪಿ ಶುಭನ್ವಿತಾ, ಡಿಸಿಎಫ್ ಸೌರಭ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



ಡಿಪೋ ಆವರಣದಲ್ಲೇ ವಾಯುವ್ಯ ಸಾರಿಗೆ ಬಸ್ ಚಾಲಕ ಆತ್ಮಹತ್ಯೆ

"ಮುಂಜಾನೆಯ ಮೆರಗು"

ಹುಬ್ಬಳ್ಳಿ, ಸೆ.27– ವಾಯುವ್ಯ ಸಾರಿಗೆ ಸಂಸ್ಥೆಯ ಬಸ್ ಚಾಲಕರೊಬ್ಬರು ನಗರದ ಡಿಪೋ ಆವರಣದಲ್ಲೇ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ಮುಂಡರಗಿ ಮೂಲದ ಮಂಜುನಾಥ್ (ಹೆಸರು) ಆತ್ಮಹತ್ಯೆ ಮಾಡಿಕೊಂಡಿರುವ ಬಸ್ ಚಾಲಕ.



ತಡರಾತ್ರಿ ನಗರದ ಗ್ರಾಮೀಣ ಘಟಕ–1ರ ಆವರಣದಲ್ಲಿರುವ ಮರಕ್ಕೆ ಮಂಜುನಾಥ್ ಅವರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇಂದು ಬೆಳಿಗಿನ ಜಾವ ಘಟನೆ ಬೆಳಕಿಗೆ ಬಂದಿದೆ.

ಮಂಜುನಾಥ್ ಅವರು ಯಾವ ಕಾರಣಕ್ಕಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬುದು ಸದ್ಯಕ್ಕೆ ತಿಳಿದುಬಂದಿಲ್ಲ. ಸುದ್ದಿ ತಿಳಿದು ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ನೇಣಿನ ಕುಣಿಕೆಯಿಂದ ಮೃತದೇಹವನ್ನು ಕೆಳಗಿಳಿಸಿ ಆಸ್ಪತ್ರೆಗೆ ರವಾನಿಸಿದ್ದಾರೆ. ಈ ಕುರಿತು ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಗವಿಸಿದ್ದೇಶ್ವರ ಶ್ರೀಗಳೇ ದಸರಾ ಉದ್ಘಾಟಿಸಲಿದ್ದಾರೆ, ಯಾವುದೇ ಗೊಂದಲ ಬೇಡ : ತಂಗಡಗಿ

"ಮುಂಜಾನೆಯ ಮೆರಗು"

ಬೆಂಗಳೂರು,ಸೆ.27– ವಿಶ್ವವಿಖ್ಯಾತ ಮೈಸೂರು ದಸರಾವನ್ನು ಕೊಪ್ಪಳದ ಗವಿಮಠದ ಶ್ರೀ ಅಭಿನವ ಗವಿಸಿದ್ದೇಶ್ವರ ಸ್ವಾಮೀಜಿಗಳು ಉದ್ಘಾಟಿಸುವುದು ನಿಶ್ಚಿತ. ಈ ಕುರಿತು ಯಾವುದೇ ಅನುಮಾನ ಅಥವಾ ಗೊಂದಲಕ್ಕೆ ಅವಕಾಶವಿಲ್ಲ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಸ್ಪಷ್ಟಪಡಿಸಿದರು.



ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಗವಿಸಿದ್ದೇಶ್ವರ ಶ್ರೀಗಳು ದಸರಾ ಉದ್ಘಾಟನೆಗೆ ಒಪ್ಪಿಲ್ಲ, ಸರ್ಕಾರದ ಆಹ್ವಾನವನ್ನು ತಿರಸ್ಕರಿಸಿದ್ದಾರೆ ಎಂಬುದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸಂಪೂರ್ಣ ಸುಳ್ಳು ಮತ್ತು ಆಧಾರರಹಿತ ಮಾಹಿತಿ ಎಂದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಶ್ರೀಗಳೊಂದಿಗೆ ಮಾತುಕತೆ ನಡೆಸಿದ ಬಳಿಕವೇ, ಈ ಬಾರಿಯ ಮೈಸೂರು ದಸರಾವನ್ನು ಗವಿಸಿದ್ದೇಶ್ವರ ಶ್ರೀಗಳು ಉದ್ಘಾಟಿಸಲಿದ್ದಾರೆ ಮುಖ್ಯಮಂತ್ರಿಗಳೇ ವಿಧಾನಸಭೆಯಲ್ಲಿ ಪ್ರಕಟಿಸಿದ್ದಾರೆ. ಈ ಅಧಿಕೃತ ಘೋಷಣೆಯ ನಂತರವೂ ಶ್ರೀಗಳು ಆಹ್ವಾನ ತಿರಸ್ಕರಿಸಿದ್ದಾರೆ ಎಂಬ ಸುಳ್ಳು ಸುದ್ದಿಯನ್ನು ಕೆಲವರು ಹರಡುತ್ತಿದ್ದಾರೆ. ಇದು ಜನರಲ್ಲಿ ಅನಗತ್ಯ ಗೊಂದಲ ಸೃಷ್ಟಿಸುವ ಪ್ರಯತ್ನವಾಗಿದೆ ಎಂದು ಹೇಳಿದ್ದಾರೆ.

ಸರ್ಕಾರವು ಈಗಾಗಲೇ ಗವಿಮಠದೊಂದಿಗೆ ಸಂಪರ್ಕ ಸಾಧಿಸಿದ್ದು, ಸೆ.28ರಂದು ಖುದ್ದು ಗವಿಮಠಕ್ಕೆ ಭೇಟಿ ನೀಡಿ ಪರಮಪೂಜ್ಯ ಶ್ರೀಗಳನ್ನು ಅಧಿಕೃತವಾಗಿ ಆಹ್ವಾನಿಸಲು ದಿನಾಂಕ ನಿಗದಿಯಾಗಿದೆ. ಹೀಗಾಗಿ, ಶ್ರೀಗಳ ಒಪ್ಪಿಗೆ ಇಲ್ಲ ಎಂಬ ಪ್ರಶ್ನೆಯೇ ಉದ್ಭವಿಸುವುದಿಲ್ಲ.

ನಾಡಹಬ್ಬ ಮೈಸೂರು ದಸರಾ ಕುರಿತು ಸುಳ್ಳು ಹಾಗೂ ಆಧಾರರಹಿತ ಮಾಹಿತಿ ಹರಡಿ ಜನರಲ್ಲಿ ಗೊಂದಲ ಸೃಷ್ಟಿಸುವವರ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಲಾಗುವುದು. ದಸರಾ ಉದ್ಘಾಟನೆ ಸೇರಿದಂತೆ ಯಾವುದೇ ಅಧಿಕೃತ ಮಾಹಿತಿಗಾಗಿ ಸರ್ಕಾರದ ಅಧಿಕೃತ ಪ್ರಕಟಣೆಗಳನ್ನೇ ಪರಿಗಣಿಸುವಂತೆ ಸಾರ್ವಜನಿಕರಲ್ಲಿ ಅವರು ಮನವಿ ಮಾಡಿದ್ದಾರೆ.

ನಾಪತ್ತೆಯಾಗಿರುವ ಎಇಇ ಫರ್ವೀಜ್ ಪತ್ತೆಗೆ ಜೆಡಿಎಸ್ ಆಗ್ರಹ


"ಮುಂಜಾನೆಯ ಮೆರಗು"

ಬೆಂಗಳೂರು, ಸೆ.27– ಕೆಆರ್ಐಡಿಎಲ್‌ನಲ್ಲಿ ಬಾಕಿ ಇರುವ ಅನುದಾನವನ್ನು ತಕ್ಷಣ ಬಿಡುಗಡೆ ಮಾಡಬೇಕು ಹಾಗೂ ನಾಪತ್ತೆಯಾಗಿರುವ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಫರ್ವೀಜ್ ಅವರನ್ನು ಕೂಡಲೇ ಪತ್ತೆಹಚ್ಚಿ ರಕ್ಷಿಸಬೇಕು ಎಂದು ಜೆಡಿಎಸ್ ಆಗ್ರಹಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಈ ಸಂಬಂಧ ಪೋಸ್ಟ್ ಮಾಡಿರುವ ಜೆಡಿಎಸ್, ಮುಂದಾಗಬಹುದಾದ ಯಾವುದೇ ಅನಾಹುತಕ್ಕೆ ಸರ್ಕಾರವೇ ನೇರ ಹೊಣೆ ಎಂದು ಎಚ್ಚರಿಸಿದೆ.

ಅನುದಾನ ಕೊರತೆ ವಿಚಾರವಾಗಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಆರೋಪ ಮಾಡಿರುವ ಜೆಡಿಎಸ್ ಗದಗದ ಕೆಆರ್ಐಡಿಎಲ್ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಫರ್ವೀಜ್ ಅವರು ನಾಪತ್ತೆಯಾಗಿರುವ ಘಟನೆಗೆ ಸಂಬಂಧಿಸಿದಂತೆ ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದೆ.

ರಾಜ್ಯದ ಬೊಕ್ಕಸವನ್ನು ಬರಿದು ಮಾಡಿರುವ ಸರ್ಕಾರ ಅಭಿವೃದ್ಧಿ ಕಾಮಗಾರಿಗಳಿಗೆ ಅಗತ್ಯ ಅನುದಾನ ನೀಡುತ್ತಿಲ್ಲ ಎಂದು ಆರೋಪಿಸಿದೆ. ಅನುದಾನ ಬಿಡುಗಡೆಯಾಗದೆ ಗುತ್ತಿಗೆದಾರರು ಮನೆಗೆ ಬಂದು ಒತ್ತಡ ಹೇರುತ್ತಿದ್ದಾರೆ, ಇದರಿಂದ ಮಾನಸಿಕ ನೆಮದಿ ಹಾಳಾಗಿದೆ ಎಂದು ಕೆಆರ್ಐಡಿಎಲ್ ವ್ಯವಸ್ಥಾಪಕ ನಿರ್ದೇಶಕರಿಗೆ ಫರ್ವೀಜ್ ಅವರು ಪತ್ರ ಬರೆದಿದ್ದಾರೆ ಎಂದು ಆಪಾದಿಸಿದೆ.

ಜೀವನ ಕೊನೆಗಾಣಿಸಿಕೊಳ್ಳುವುದಾಗಿ ಪತ್ರದಲ್ಲಿ ಉಲ್ಲೇಖಿಸಿ ಅಧಿಕಾರಿ ನಾಪತ್ತೆಯಾಗಿದ್ದಾರೆ ಎಂದು ಜೆಡಿಎಸ್ ಹೇಳಿದ್ದು, ಅವರ ಕುಟುಂಬ ಕಣ್ಣೀರಿನಲ್ಲಿ ಮುಳುಗಿದೆ ಎಂದು ತಿಳಿಸಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಹಲವು ಆತಹತ್ಯೆ ಪ್ರಕರಣಗಳು ನಡೆದಿವೆ ಎಂದು ಆರೋಪಿಸಿರುವ ಜೆಡಿಎಸ್, ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರ್ಬಳಕೆ ಆರೋಪದ ಹಿನ್ನೆಲೆಯಲ್ಲಿ ಚಂದ್ರಶೇಖರ್, ಪಿಎಸ್ಐ ಪರಶುರಾಮ್, ಬೆಳಗಾವಿಯ ರುದ್ರಣ್ಣ ಯಡವಣ್ಣವರ್, ದಾವಣಗೆರೆಯ ಗುತ್ತಿಗೆದಾರ ಪಿ.ಎನ್. ಗೌಡರ್ ಹಾಗೂ ರಾಮನಗರದ ನಾಗೇಶ್ ಪ್ರಕರಣಗಳನ್ನು ಉಲ್ಲೇಖಿಸಿದೆ.



ಇದೀಗ ಅನುದಾನ ಕೊರತೆಯ ಹಿನ್ನೆಲೆಯಲ್ಲಿ ಕೆಆರ್ಐಡಿಎಲ್ ಅಧಿಕಾರಿ ಫರ್ವೀಜ್ ಅವರ ಪ್ರಕರಣವೂ ನಡೆದಿದೆ ಎಂದು ಹೇಳಿದೆ.ರಾಜ್ಯದಲ್ಲಿ ಹೊಸ ಯೋಜನೆಗಳನ್ನು ಘೋಷಿಸಬಾರದು, ಖಜಾನೆಯಲ್ಲಿ ಹಣದ ಕೊರತೆಯಿದೆ ಎಂದು ಆರ್ಥಿಕ ಇಲಾಖೆ ಪತ್ರ ಬರೆಯುತ್ತಿದೆ. ಮತ್ತೊಂದೆಡೆ, ಪ್ರಣಾಳಿಕೆಯಲ್ಲಿ ನೀಡಿರುವ ಭರವಸೆಗಳನ್ನು ಈಡೇರಿಸುವಂತೆ ಕಾಂಗ್ರೆಸ್ ನಾಯಕರಾದ ಬಿ.ಆರ್. ಪಾಟೀಲ್ ಮತ್ತು ಬಿ.ಕೆ.ಹರಿಪ್ರಸಾದ್ ಅವ

ಜ್ಞಾನೇಶ್ ಕುಮಾರ್ ಬಂಧಿಸಿ ಕಠಿಣಕ್ರಮ ಕೈಗೊಳ್ಳುವಂತೆ ಸಿದ್ದರಾಮಯ್ಯ ಆಗ್ರಹ

"ಮುಂಜಾನೆಯ ಮೆರಗು"


ಬೆಂಗಳೂರು, ಸೆ.27– ಕೇಂದ್ರ ಚುನಾವಣಾ ಅಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಿ ಕೂಡಲೇ ಬಂಧಿಸಿ ಕಠಿಣಕ್ರಮ ಕೈಗೊಳ್ಳಬೇಕು ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ.

ನಗರದ ಫ್ರೀಡಂಪಾರ್ಕ್‌ನಲ್ಲಿ ಆಯೋಜಿಸಲಾಗಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಜ್ಞಾನೇಶ್ ಕುಮಾರ್ ಅವರನ್ನು ವಜಾ ಗೊಳಿಸಲು ರಾಷ್ಟ್ರಪತಿಯವರು ತಕ್ಷಣ ಕ್ರಮ ಕೈಗೊಳ್ಳಬೇಕು ಮತ್ತು ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ವಿಚಾರಣೆ ನಡೆಸಲು ಕೇಂದ್ರ ಸರ್ಕಾರಕ್ಕೆ ಆದೇಶ ನೀಡಬೇಕೆಂದು ಒತ್ತಾಯಿಸಿದರು.

ನಿಷ್ಪಕ್ಷಪಾತವಾಗಿ ಚುನಾವಣೆ ನಡೆಯದೇ ಇದ್ದರೆ, ಪ್ರಜಾಪ್ರಭುತ್ವಕ್ಕೆ ಅಪಾಯವಾಗಲಿದೆ. ಇತ್ತೀಚಿನ ದಿನಗಳಲ್ಲಿ ಬಿಜೆಪಿ ಚುನಾವಣಾ ಆಯೋಗವನ್ನು ಖರೀದಿಸಿ ಅಥವಾ ದುರುಪಯೋಗ ಪಡಿಸಿಕೊಂಡು ಚುನಾವಣೆಯನ್ನು ಗೆಲ್ಲುತ್ತಿದೆ. ಪ್ರಧಾನಿ ನರೇಂದ್ರ ಮೋದಿಯವರು ಮತಗಳ್ಳತನ ಮಾಡಿ ಅಥವಾ ಆಯೋಗವನ್ನು ದುರುಪಯೋಗಪಡಿಸಿಕೊಂಡು ಅಧಿಕಾರ ಹಿಡಿದಿದ್ದಾರೆ. ಅವರದು ನ್ಯಾಯಯುತವಾದ ಗೆಲುವಲ್ಲ, ಹಿಂಬಾಗಿಲ ಮೂಲಕ ಪ್ರಧಾನಿಯಾದ ಮೋದಿಯವರಿಗೆ ಹುದ್ದೆಯಲ್ಲಿ ಮುಂದುವರೆಯಲು ಯಾವುದೇ ನೈತಿಕ ಹಕ್ಕಿಲ್ಲ ಎಂದು ಆಗ್ರಹಿಸಿದರು.

75 ವರ್ಷ ದಾಟಿದವರು ಅಧಿಕಾರದಲ್ಲಿ ಮುಂದುವರೆಯುವಂತಿಲ್ಲ ಎಂದು ಬಿಜೆಪಿಯಲ್ಲಿ ಬಹುತೇಕರನ್ನು ಅಧಿಕಾರದಿಂದ ಕೆಳಗಿಳಿಸಲಾಗಿದೆ. ಆದರೆ ನರೇಂದ್ರ ಮೋದಿಯವರು 75 ವರ್ಷ ದಾಟಿದರೂ ಇನ್ನೂ ಪ್ರಧಾನಿ ಹುದ್ದೆಯಲ್ಲಿ ಮುಂದುವರೆದಿದ್ದಾರೆ. ಇವರೊಬ್ಬರಿಗೆ ವಿನಾಯಿತಿ ಏಕೆ? ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು.

ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ ಮಾತನಾಡಿ, ಬಿಜೆಪಿ ಅಧಿಕಾರಕ್ಕೆ ಬಂದ ನಂತರ ಚುನಾವಣಾ ವ್ಯವಸ್ಥೆ ಹಾಳಾಗುತ್ತಿದೆ ಎಂದು ಆರೋಪಿಸಿದರು. ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ



ಪ್ರಕ್ರಿಯೆ ವ್ಯವಸ್ಥೆಯನ್ನೇ ಬುಡಮೇಲು ಮಾಡುತ್ತಿದೆ ಎಂದು ದೂರಿದರು. ಚುನಾವಣಾ ಆಯೋಗ ಮತದಾರರ ಪಟ್ಟಿಯಲ್ಲಿ ಅನಗತ್ಯವಾಗಿ ಹಸ್ತಕ್ಷೇಪ ಮಾಡಬಾರದು.

ಮತದಾರರ ಪಟ್ಟಿಗೆ ಸಂಬಂಧಿಸಿದ ಅಧಿಕಾರಗಳು ಜಿಲ್ಲಾಧಿಕಾರಿಗಳ ವ್ಯಾಪ್ತಿಯಲ್ಲಿರಬೇಕು ಎಂದು ಮೊಯ್ಲಿ ಹೇಳಿದರು. ಕೋಟ್ಯಂತರ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದು ಆರೋಪಿಸಿದ ಅವರು, ಇದರಿಂದ ಪ್ರಜಾಪ್ರಭುತ್ವ ವ್ಯವಸ್ಥೆಗೆ ಧಕ್ಕೆ ಉಂಟಾಗಿದೆ ಎಂದರು.

ಮುಖ್ಯ ಚುನಾವಣಾ ಆಯುಕ್ತರು ಸರ್ವಾಧಿಕಾರಿ ರೀತಿಯಲ್ಲಿ ನಡೆದುಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದ ಮೊಯ್ಲಿ, ತಮಗೆ ಬೇಕಾದ ಪಕ್ಷವನ್ನು ಅಧಿಕಾರಕ್ಕೆ ತರುವ ಪ್ರಯತ್ನ ನಡೆಯುತ್ತಿದೆ ಎಂದು ದೂರಿದರು. ಚುನಾವಣಾ ಕಾನೂನುಗಳಲ್ಲಿ ಅಗತ್ಯ ಬದಲಾವಣೆಗಳನ್ನು ತರಬೇಕು ಎಂದು ಹೇಳಿದರು.

ಮಾಜಿ ಸಚಿವ ದಿನೇಶ್ ಗುಂಡೂರಾವ್ ಮಾತನಾಡಿ, ದೇಶದ ಚುನಾವಣಾ ವ್ಯವಸ್ಥೆ ಹಿಂದೆ ಪಾರದರ್ಶಕವಾಗಿತ್ತು. ಚುನಾವಣಾ ಆಯೋಗ ಸ್ವಾಯತ್ತವಾಗಿ ಕಾರ್ಯನಿರ್ವಹಿಸುತ್ತಿದ್ದ ಕಾರಣ ಜಗತ್ತಿನಾದ್ಯಂತ ಭಾರತದ ಚುನಾವಣಾ ವ್ಯವಸ್ಥೆಗೆ ಉತ್ತಮ ಹೆಸರು ಇತ್ತು. ಆದರೆ ಇಂದು ಚುನಾವಣಾ ಆಯೋಗದ ಕಾರ್ಯವೈಖರಿ ಬಗ್ಗೆ ಪ್ರಶ್ನೆಗಳು ಮೂಡಿವೆ ಎಂದು ಹೇಳಿದರು.

ಮತದಾರರ ಪಟ್ಟಿಯಲ್ಲಿನ ಅಕ್ರಮಗಳ ಕುರಿತು ರಾಹುಲ್ ಗಾಂಧಿ ಧ್ವನಿ ಎತ್ತಿದ್ದರು. ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ವಿಚಾರದಲ್ಲೂ ಅವರು ಪ್ರಶ್ನೆಗಳನ್ನು ಎತ್ತಿದ್ದರು. ಆದರೆ ಈ ವಿಚಾರಗಳಿಗೆ ಅಗತ್ಯ ಗಮನ ದೊರೆಯಲಿಲ್ಲ ಎಂದು ದಿನೇಶ್ ಗುಂಡೂರಾವ್ ಹೇಳಿದರು. ಬಿಹಾರ ವಿಧಾನಸಭಾ ಚುನಾವಣೆಗೆ ಕೆಲವೇ ತಿಂಗಳುಗಳಿರುವಾಗ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಆರಂಭಿಸಲಾಯಿತು. ಪಶ್ಚಿಮ ಬಂಗಾಳದಲ್ಲೂ ಇದೇ ರೀತಿಯ ಪ್ರಕ್ರಿಯೆ ಆರಂಭಿಸಲಾಗಿದೆ. ಚುನಾವಣೆ ಸಮೀಪದಲ್ಲೇ ಇಂತಹ ಕ್ರಮ ಕೈಗೊಳ್ಳುವ ಅಗತ್ಯವೇನು ಎಂದು ಅವರು ಪ್ರಶ್ನಿಸಿದರು.

ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಲಕ್ಷಾಂತರ ಅರ್ಜಿಗಳು ನ್ಯಾಯಮಂಡಳಿಗಳ ಮುಂದೆ ಬಾಕಿ ಉಳಿದಿವೆ. ಆದರೆ ಅವರಿಗೆ ಇನ್ನೂ ನ್ಯಾಯ ದೊರೆತಿಲ್ಲ ಎಂದು ದಿನೇಶ್ ಗುಂಡೂರಾವ್ ಹೇಳಿದರು.

ಪ್ರಧಾನಿ ಸೇರಿದಂತೆ ಕೆಲವರು ಏನೇ ಮಾತನಾಡಿದರೂ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದಿಲ್ಲ. ಆದರೆ ಇತರರು ಇದೇ ರೀತಿಯ ಹೇಳಿಕೆ ನೀಡಿದರೆ ತಕ್ಷಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಆರೋಪಿಸಿದ ಅವರು, ಚುನಾವಣಾ ಆಯೋಗದ ಕಾರ್ಯವೈಖರಿ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದರು.ಪ್ರತಿಭಟನೆಯಲ್ಲಿ ಸಚಿವ ರಾಮಲಿಂಗಾರೆಡ್ಡಿ, ಮಾಜಿ ಸಚಿವೆ ರಾಣಿ ಸತೀಶ್, ವಿಧಾನ ಪರಿಷತ್ ಹಾಗೂ ವಿಧಾನಸಭೆಯ ಸದಸ್ಯರು ಭಾಗವಹಿಸಿದ್ದರು. ಎಲ್ಲರೂ ತೋಳಿಗೆ ಕಪ್ಪುಪಟ್ಟಿ ಧರಿಸಿ, ಪ್ಲೇ ಕಾರ್ಡ್ ಹಿಡಿದು ಘೋಷಣೆ ಕೂಗಿದರು.

ಔಷಧಗಳ ಖರೀದಿ ದರ ಗರಿಷ್ಠ ಚಿಲ್ಲರೆ ದರಗಳ ನಡುವೆ ಭಾರಿ ವ್ಯತ್ಯಾಸ

"ಮುಂಜಾನೆಯ ಮೆರಗು"

ಬೆಂಗಳೂರು,ಸೆ.27– ಔಷಧಗಳ ಖರೀದಿ ದರ ಮತ್ತು ರೋಗಿಗಳಿಗೆ ವಿಧಿಸಲಾಗುತ್ತಿರುವ ಗರಿಷ್ಠ ಚಿಲ್ಲರೆ ದರದ ನಡುವೆ ಭಾರೀ ವ್ಯತ್ಯಾಸ ಕಂಡುಬಂದಿರುವ ಹಿನ್ನೆಲೆಯಲ್ಲಿ ಕರ್ನಾಟಕ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ 254 ಔಷಧ ತಯಾರಿಕಾ ಕಂಪನಿಗಳ ಉತ್ಪನ್ನಗಳ ಬೆಲೆ ವಿವರಗಳ ಪಟ್ಟಿಯನ್ನು ಸಿದ್ಧಪಡಿಸಿ ರಾಷ್ಟ್ರೀಯ ಔಷಧ ಬೆಲೆ ನಿಯಂತ್ರಣ ಪ್ರಾಧಿಕಾರಕ್ಕೆ ಕಳುಹಿಸಿದೆ.



ಕಡಿಮೆ ದರದಲ್ಲಿ ಔಷಧ, ವೈದ್ಯಕೀಯ ಉಪಕರಣ ಹಾಗೂ ಆಸ್ಪತ್ರೆಗಳಲ್ಲಿ ಬಳಕೆಯಾಗುವ ಕನ್ಯೂಮಬಲ್ಸ್‌ಗಳನ್ನು ಖರೀದಿಸಿ, ಹೆಚ್ಚಿನ ಎಂಆರ್‌ಪಿ ಆಧಾರದಲ್ಲಿ ರೋಗಿಗಳಿಗೆ ಬಿಲ್ ಮಾಡಲಾಗುತ್ತಿದೆ ಎಂಬ ದೂರುಗಳ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಎಫ್‌ಡಿಎ ಆಯುಕ್ತ ಕೆ.ಶ್ರೀನಿವಾಸ್ ಅವರು, ಡ್ರಗ್ಸ್ ಆರ್ಡರ್ 2013 ಅಡಿಯಲ್ಲಿ ಅಗತ್ಯ ನಿಯಂತ್ರಣ ಕ್ರಮ ಕೈಗೊಳ್ಳುವಂತೆ ಕೇಂದ್ರ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

ಎಫ್‌ಡಿಎ ಉಲ್ಲೇಖಿಸಿರುವ ಪ್ರಕರಣವೊಂದರಲ್ಲಿ 86 ರೂ.ಗಳ ಲ್ಯಾಂಡಿಂಗ್ ಕಾಸ್ಟ್ ಇರುವ ಔಷಧಕ್ಕೆ 4,528 ರೂ. ಎಂಆರ್‌ಪಿ ನಿಗದಿಪಡಿಸಲಾಗಿದೆ. ಮತ್ತೊಂದು ಪ್ರಕರಣದಲ್ಲಿ 160 ರೂ. ಔಷಧಕ್ಕೆ 7,110 ರೂ. ಎಂಆರ್‌ಪಿ ಇದೆ.

ಇದೇ ರೀತಿ ಸೈಟ್ಯಾಕ್ಸ್ 100 ಎಗೆ 342ರ ಲ್ಯಾಂಡಿಂಗ್ ಕಾಸ್ಟ್ ಎದುರು 3,836 ರೂ. ಎಂಆರ್‌ಪಿ ಹಾಗೂ ಬಿವಾಟಾಸ್ 400 ಎಂಜಿ ಇಂಜೆಕ್ಷನ್‌ಗೆ 5,850 ರೂ. ಎದುರು 62,690 ರೂ. ಎಂಆರ್‌ಪಿ ಇರುವುದನ್ನು ಇಲಾಖೆ ಉಲ್ಲೇಖಿಸಿದೆ.

ಎಂಆರ್‌ಪಿ ಮತ್ತು ಲ್ಯಾಂಡಿಂಗ್ ಕಾಸ್ಟ್ ನಡುವಿನ ಸಂಪೂರ್ಣ ವ್ಯತ್ಯಾಸವನ್ನೇ ಲಾಭವೆಂದು ಪರಿಗಣಿಸಲಾಗುವುದಿಲ್ಲ ಎಂದು ಎಫ್‌ಡಿಎ ಸ್ಪಷ್ಟಪಡಿಸಿದೆ. ವಿತರಣೆ, ತೆರಿಗೆ ಮತ್ತು ಇತರ ವೆಚ್ಚಗಳೂ ಬೆಲೆಯ ಭಾಗವಾಗುತ್ತವೆ.ಆಸ್ಪತ್ರೆಗಳ ಔಷಧ, ವೈದ್ಯಕೀಯ ಸಾಧನ ಹಾಗೂ ಕನ್ಯೂಮಬಲ್ಸ್‌ಗಳ ಟ್ರೇಡ್ ಮಾರ್ಜಿನ್‌ಗೆ ಮಿತಿ ನಿಗದಿಪಡಿಸುವಂತೆಯೂ ಎಫ್‌ಡಿಎ ಕೇಂದ್ರಕ್ಕೆ ಮನವಿ ಮಾಡಿದೆ.

ನಮ್ಮ ಸರ್ಕಾರ ನುಡಿದಂತೆ ನಡೆಯುತ್ತಿಲ್ಲ, ರಾಹುಲ್ ಗಾಂಧಿಗೆ ದೂರು ನೀಡುತ್ತೇನೆ : ಶಾಸಕ ಬಿ.ಆರ್.ಪಾಟೀಲ್

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.27– ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಯುತ್ತಿಲ್ಲ. ಇದರ ವಿರುದ್ಧ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ದೂರು ನೀಡುವುದಾಗಿ ಕಾಂಗ್ರೆಸ್‌ಪಕ್ಷದ ಶಾಸಕ ಬಿ.ಆರ್.ಪಾಟೀಲ್ ದೂರಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮದೇ ಸರ್ಕಾರದ ವಿರುದ್ಧ ಕಿಡಿ ಕಾರಿದ್ದಾರೆ. ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರು ಹಣಕಾಸು ಸಚಿವರಾಗಿ ರೂಪಿಸಿದ್ದ ಬಜೆಟ್ ಅನ್ನು ಬದಲಾವಣೆ ಮಾಡುವಲ್ಲಿಯೂ ಕೆಲವು ಕಾಣದ ಕೈಗಳು ಕೆಲಸ ಮಾಡಿದ್ದವು ಎಂದು ಗಂಭೀರ ಆರೋಪ ಮಾಡಿದ್ದಾರೆ.

ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದಾಗ ತಾನು ಯೋಜನಾ ಆಯೋಗದ ಉಪಾಧ್ಯಕ್ಷನಾಗಿದ್ದೆ. ಬಜೆಟ್ ತಯಾರಿಕೆಯ ಸಭೆಯಲ್ಲಿ ಭಾಗವಹಿಸಿದ್ದೆ.ಚುನಾವಣೆಯ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯಲ್ಲಿ ಭೂ ಸುಧಾರಣಾ ಕಾಯ್ದೆಯ ತಿದ್ದುಪಡಿ 79ಎ, ಬಿ, ಸಿ ಸೆಕ್ಷನ್‌ಗಳನ್ನು ತೆಗೆದು ಹಾಕುವುದಾಗಿ ಭರವಸೆ ನೀಡಲಾಗಿತ್ತು.

ಈ ಸೆಕ್ಷನ್‌ಗಳಿಂದ ಕೃಷಿಕಲ್ಲದವರು ಭೂಮಿ ಖರೀದಿಸಲು ಅವಕಾಶ ಕಲ್ಪಿಸಲಾಗಿದೆ. ಇದರಿಂದ ಶ್ರೀಮಂತರು ರೈತರ ಭೂಮಿ ಕಸಿಯುತ್ತಿದ್ದಾರೆ. ಬಡವರು ಭೂಮಿ ಮಾರಾಟ ಮಾಡಿಕೊಳ್ಳುತ್ತಿದ್ದಾರೆ. ತಿದ್ದುಪಡಿಯನ್ನು ರದ್ದು ಪಡಿಸಿ ಮೂಲ ಕಾನೂನನ್ನು ಮರು ಸ್ಥಾಪಿಸಲಾಗುತ್ತದೆ ಎಂದು ಕಾಂಗ್ರೆಸ್ ಹೇಳಿತ್ತು.

ಸಿದ್ದರಾಮಯ್ಯ ಬಜೆಟ್ ತಯಾರಿಕೆಯ ವೇಳೆ ಈ ಬಗ್ಗೆ ಚರ್ಚೆಯಾಗಿತ್ತು. ಸಿದ್ದರಾಮಯ್ಯ ಅವರು ಕಾನೂನು ತಿದ್ದುಪಡಿಗೆ ಒಪ್ಪಿದ್ದರು. ಬಜೆಟ್ ಭಾಷಣದ ಪ್ರತಿಯಲ್ಲಿ ಸೇರ್ಪಡೆಯಾಯಿತು. ಸರಿ-ತಪ್ಪುಗಳನ್ನು ಪರಾಮರ್ಶಿಸುವ ಪ್ರೂಫ್ ರೀಡಿಂಗ್ ಮುಗಿಯಿತು. ಕೊನೇ ಕ್ಷಣದಲ್ಲಿ ಮುದ್ರಣಕ್ಕೂ ಹೋಗಿತ್ತು. ಆದರೆ ಬೆಳಗ್ಗೆ ಮಂಡನೆಯಾದ ಬಜೆಟ್‌ನಲ್ಲಿ ಭೂ ಸುಧಾರಣಾ ಕಾಯ್ದೆಯ ತಿದ್ದುಪಡಿ ಅಂಶ ಇರಲಿಲ್ಲ. ರಾತ್ರೋರಾತ್ರಿ ಕಾಣದ ಕೈಗಳು ಪ್ರಭಾವ ಬೀರಿ ಬದಲಾವಣೆ ಮಾಡಿದ್ದವು ಎಂದು ಹೇಳಿದರು.

ಸಿದ್ದರಾಮಯ್ಯ ಅವರು ಸಿದ್ಧಪಡಿಸಿದ್ದ ಬಜೆಟ್ ಅನ್ನು ಬದಲಾವಣೆ ಮಾಡಿದ್ದರ ಹಿಂದೆ ಪ್ರಭಾವಿಗಳ ಕೈವಾಡ ಇತ್ತು ಎಂದು ದೂರಿದರು. ನಂತರ ನಾನು ಯೋಜನಾ ಆಯೋಗದ ಉಪಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನಿಡಿದ್ದೆ. ಅದನ್ನು ವಾಪಸ್ ಪಡೆಯಲು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲ ತಮ ಮನವೊಲಿಸುವ ಪ್ರಯತ್ನ ಮಾಡಿದ್ದರು. ಯಾವ ಪುರುಷಾರ್ಥಕ್ಕೆ ತಾವು ಆಯೋಗದ ಉಪಾಧ್ಯಕ್ಷರಾಗಿರಬೇಕೆಂದು ತಾವು ಅವರನ್ನು ಪ್ರಶ್ನಿಸಿದ್ದಾಗಿ ತಿಳಿಸಿದರು.

ಇದನ್ನು ತಾವು ಇಲ್ಲಿಗೇ ಬಿಡುವುದಿಲ್ಲ, ಎಐಸಿಸಿ ಮುಖಂಡರು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿಯವರಿಗೆ ಪತ್ರ ಬರೆಯುತ್ತೇನೆ ಎಂದು ಎಚ್ಚರಿಸಿದ್ದಾರೆ. ಕಾಂಗ್ರೆಸ್ ಪಕ್ಷ ಕೊಟ್ಟ ಮಾತಿನಂತೆ ನಡೆದುಕೊಳ್ಳಬೇಕು ಎಂದು ಅವರು ಪುನರುಚ್ಚರಿಸಿದರು.

ಕೃಷಿ ಪತ್ತಿನ ಸಹಕಾರ ಸಂಘದ ವಾರ್ಷಿಕ ಮಹಾಸಭೆ ಸದಸ್ಯರೆ ವಿವಿಧ ಸಮಸ್ಯೆಗಳ ಕುರಿತು ಚರ್ಚೆ

"ಮುಂಜಾನೆಯ ಮೆರಗು"

ಜಗಳೂರು ಸೆ, 27– ಪಟ್ಟಣದ ಕೃಷಿ ಪತ್ತಿನ ಸಹಕಾರ ಸಂಘದ ವಾರ್ಷಿಕ ಮಹಾಸಭೆಯು ಶುಕ್ರವಾರ ಸಂಘದ ಕಚೇರಿಯಲ್ಲಿ ಅಧ್ಯಕ್ಷ ಜಗಳೂರಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಸಭೆಯಲ್ಲಿ ಸಂಘದ ಆಡಳಿತಾತ್ಮಕ ಹಾಗೂ ಆರ್ಥಿಕ ವಿಚಾರಗಳು ಸೇರಿದಂತೆ ಸದಸ್ಯರಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಯಿತು. ಸಂಘದ ಪ್ರಗತಿ, ಸದಸ್ಯರಿಗೆ ಒದಗಿಸಲಾಗುತ್ತಿರುವ ಸೇವೆಗಳು, ಸಾಲ ಸೌಲಭ್ಯಗಳು ಹಾಗೂ ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾರ್ಯಗಳ ಕುರಿತು ಸದಸ್ಯರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ಸಹಕಾರ ಸಂಘವು ರೈತರು ಹಾಗೂ ಸದಸ್ಯರ ಆರ್ಥಿಕ ಚಟುವಟಿಕೆಗಳಿಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿದ್ದು, ಸದಸ್ಯರಿಗೆ ಅಗತ್ಯವಿರುವ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸುವ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ಮತ್ತಷ್ಟು ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.



ಸಭೆಯಲ್ಲಿ ಸಂಘದ ನಿರ್ದೇಶಕರಾದ ಅಡಿವೆಪ್ಪ, ಉಮೇಶ್, ಬಾಬು, ಸುರೇಶ್, ಕಾಂತಮ್ಮ, ಪರಮೇಶ್ವರಪ್ಪ, ನಾಗಭೂಷಣ್, ಸುನಂದಾ, ಕವಿತಾ, ರೆಹಮಾನ್, ರಾಘವೇಂದ್ರ ಸೇರಿದಂತೆ ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಸಿಇಒ) ರಾಮು ಹಾಗೂ ಲೆಕ್ಕಿಗ ಮೂರ್ತಿ ಮತ್ತು ಸಂಘದ ಸದಸ್ಯರು ಉಪಸ್ಥಿತರಿದ್ದರು.

ಬಿಡದಿ ಟೌನ್‌ಶಿಪ್ ವಿರುದ್ಧದ ರೈತರ ಹೋರಾಟವನ್ನು ರಾಜ್ಯ ಸರ್ಕಾರ ಹತ್ತಿಕ್ಕುತ್ತಿದೆ : ಹೆಚ್ಡಿಕೆ ಆರೋಪ

"ಮುಂಜಾನೆಯ ಮೆರಗು"

ಬೆಂಗಳೂರು,ಸೆ.27– ಬಿಡದಿ ಉಪನಗರ ಯೋಜನೆಯ ಭೂ ಸ್ವಾಧೀನ ವಿರೋಧಿಸಿ ನಡೆಸುತ್ತಿರುವ ರೈತರ ಹೋರಾಟವನ್ನು ರಾಜ್ಯ ಸರ್ಕಾರ ಹತ್ತಿಕ್ಕುತ್ತಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಐದು ದಿನಗಳಿಂದ ರೈತರು ಪ್ರತಿಭಟನೆ ಮಾಡುತ್ತಿದ್ದಾಗ ಸುಮನಿದ್ದು, ನಿನ್ನೆ ರೈತರ ಮೇಲೆ ಏಕಾಏಕಿ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿದ್ದಾರೆ. ರೈತರ ಪರವಾಗಿ ನಮ ಪಕ್ಷ ನಿಂತು ಹೋರಾಟ ನಡೆಸಲಿದೆ ಎಂದರು.

ಮುಖ್ಯಮಂತ್ರಿಯಾಗಿ ಎರಡು ಬಾರಿ ರೈತರ ಸಾಲಮನ್ನ ಮಾಡಿದ್ದಾಗಲೂ ಕೇಂದ್ರ ಸರ್ಕಾರದ ಬಳಿ ಕೈ ಚಾಚಿರಲಿಲ್ಲ. 28 ಸಾವಿರ ಕೋಟಿ ರೂ. ಬೆಳೆ ಸಾಲವನ್ನು ಮನ್ನಾ ಮಾಡಿದ್ದೆ. ಕಬ್ಬು ಬೆಳೆಗಾರರ 2,500 ಕೋಟಿ ರೂ. ಸಾಲ ಮನ್ನಾ ಮಾಡಿದ್ದೆ ಎಂದು ಕಾಂಗ್ರೆಸ್ ಸರ್ಕಾರಕ್ಕೆ



ತಿರುಗೇಟು ನೀಡಿದರು.

ನಾವು ಬೆಂಬಲ ಕೊಟ್ಟಿದ್ದರಿಂದಲೇ ಕುಮಾರಸ್ವಾಮಿ ರೈತರ ಸಾಲ ಮನ್ನಾ ಮಾಡಿದ್ದಾರೆ ಎಂದು ಕಾಂಗ್ರೆಸ್‌ನವರು ಹೇಳುತ್ತಾರೆ. ರೈತರಿಗೆ ಸಹಾಯ ಮಾಡುವ ಉದ್ದೇಶದಿಂದಲೇ ನಾನು ಈ ಪಾಪಿಗಳ ಜೊತೆಗೆ ಸೇರಿದ್ದು, 14 ತಿಂಗಳ ಅವಧಿಯಲ್ಲಿ ಮೈಕ್ರೋ ಫೈನಾನ್ಸ್ ಹಾವಳಿಯನ್ನು ತಪ್ಪಿಸಲು ಸಾಲ ಮನ್ನಾ ಮಾಡಬೇಕಾಯಿತು. ನಾನು ಮುಖ್ಯಮಂತ್ರಿ ಸ್ಥಾನ ಬಿಟ್ಟ ಮೇಲೆ ಏನಾಯಿತು ಎಂಬುದನ್ನು ಹೇಳಬೇಕಿಲ್ಲ ಎಂದರು.

ಬರ ಪರಿಹಾರವಾಗಿ ಪ್ರತಿ ರೈತರಿಗೆ 2,500 ರೂ. ಕೊಡುತ್ತಿದ್ದಾರೆ. ಕಾಫಿ-ತಿಂಡಿಗೆ 200 ಕೋಟಿ ಖರ್ಚು ಮಾಡುತ್ತಾರೆ. 2,500 ಹಣದಲ್ಲಿ ಏನು ಮಾಡಲು ಸಾಧ್ಯ? ಯಾವ ಭಾಗದಲ್ಲಿ ರೈತರ ಬೆಳೆ ಎಷ್ಟು ಹಾನಿಯಾಗಿದೆ ಎಂಬುದನ್ನು ವೈಜ್ಞಾನಿಕವಾಗಿ ಪರಿಗಣಿಸಿ ಪರಿಹಾರ ನೀಡಲು ತೀರ್ಮಾನಿಸಿ ಕೇಂದ್ರ ಸರ್ಕಾರದ ಬಳಿಗೆ ಸರ್ವ ಪಕ್ಷಗಳ ನಿಯೋಗ ಕೊಂಡೊಯ್ಯುವುದರಿಂದ ರಾಜ್ಯ ಸರ್ಕಾರಕ್ಕೆ ಖರ್ಚು ಹೆಚ್ಚಾಗಲಿದೆ. ಅದರ ಬದಲು ಸರ್ಕಾರದ ಮುಖ್ಯಮಂತ್ರಿ, ಸಚಿವರು ಕೇಂದ್ರದ ಬಳಿ ಹೋಗಿ ಮನವಿ ಸಲ್ಲಿಸಿ ಬರಲು ಆಗುವುದಿಲ್ಲವೇ ಎಂದು ಪ್ರಶ್ನಿಸಿದರು.

ರಾಜ್ಯದ ಖಜಾನೆ ಖಾಲಿಯಾಗಿದೆ ಎಂದು ನಾನು ಹೇಳುತ್ತಿಲ್ಲ. ಆದರೆ ಖಾಲಿ ಮಾಡಿಕೊಂಡು ಕುಳಿತಿರುವವರು ನೀವು ಎಂದು ತ

ಪ್ರಜಾ ಸೇವಾ ಆಂದೋಲನದಲ್ಲಿ ಅಧಿಕಾರಿಗಳ ಕಾರ್ಯವೈಖರಿ ಬಗ್ಗೆ ಪ್ರಶ್ನೆಗಳ ಸುರಿಮಳೆ

"ಮುಂಜಾನೆಯ ಮೆರಗು"

ಜಗಳೂರು ಸೆ, 27– ಸಾರ್ವಜನಿಕರ ಅಹವಾಲುಗಳಿಗೆ ಸ್ಪಂದಿಸುವ ಉದ್ದೇಶದಿಂದ ಹಮ್ಮಿಕೊಂಡಿದ್ದ ಪ್ರಜಾ ಸೇವಾ ಆಂದೋಲನದಲ್ಲಿ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳ ಕಾರ್ಯವೈಖರಿ ಕುರಿತು ಸಾರ್ವಜನಿಕರು ಹಾಗೂ ರೈತರಿಂದ ಪ್ರಶ್ನೆಗಳ ಸುರಿಮಳೆಯೇ ಹರಿದುಬಂದಿತು.

ಶನಿವಾರ ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲೂಕು ಆಡಳಿತದ ವತಿಯಿಂದ ಆಯೋಜಿಸಿದ್ದ ಪ್ರಜಾ ಸೇವಾ ಆಂದೋಲನದಲ್ಲಿ ವಿವಿಧ ಸಮಸ್ಯೆಗಳನ್ನು ಹೊತ್ತು ತಂದಿದ್ದ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಅಧಿಕಾರಿಗಳ ಮುಂದಿಟ್ಟರು. ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ಸಮಸ್ಯೆಗಳಿಗೆ ಪರಿಹಾರ ದೊರೆಯುತ್ತಿಲ್ಲ ಎಂದು ಕೆಲವರು ಅಸಮಾಧಾನ ವ್ಯಕ್ತಪಡಿಸಿದರು.

ಕುಂಬಳಕಾಯಿ ಬೆಳೆ: ಹೂವು, ಕಾಯಿ ಕಟ್ಟದೆ ರೈತರ ಆತಂಕ

ತಾಲೂಕಿನ ಓಬಳಾಪುರ ಸೇರಿದಂತೆ 24 ಗ್ರಾಮಗಳಲ್ಲಿ ಕುಂಬಳಕಾಯಿ ಬೆಳೆಯನ್ನು ಬಿತ್ತನೆ ಮಾಡಲಾಗಿದ್ದು, ಬೆಳೆ ಸಮೃದ್ಧವಾಗಿ ಬೆಳೆದಿದ್ದರೂ ಹೂವು ಮತ್ತು ಕಾಯಿ ಕಟ್ಟುತ್ತಿಲ್ಲ. ಇದರಿಂದ ರೈತರು ಆತಂಕಕ್ಕೊಳಗಾಗಿದ್ದಾರೆ ಎಂದು ಓಬಳಾಪುರ ಗ್ರಾಮದ ರೈತ ಅಂಜಿನಪ್ಪ ಅಹವಾಲು ನೀಡಿದರು.

ಈ ಕುರಿತು ತೋಟಗಾರಿಕೆ ಇಲಾಖೆಯ ಜಿಲ್ಲಾ ಹಾಗೂ ತಾಲೂಕು



ಮಟ್ಟದ ಅಧಿಕಾರಿಗಳ ಗಮನಕ್ಕೆ ಹಲವು ಬಾರಿ ತಂದರೂ ಯಾವುದೇ ಪ್ರಯೋಜನವಾಗಿಲ್ಲ. ಕಳಪೆ ಗುಣಮಟ್ಟದ ಬೀಜಗಳನ್ನು ನೀಡಿರುವ ಸಾಧ್ಯತೆಯ ಬಗ್ಗೆ ಅನುಮಾನವಿದ್ದು, ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಬೆಳೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ವೆಂಕಟೇಶ್, ಸಮಸ್ಯೆಯ ಕುರಿತು ಜಿಲ್ಲಾ ಮಟ್ಟಕ್ಕೆ ವರದಿ ಸಲ್ಲಿಸಲಾಗಿದೆ. ಕತ್ತಲಗೆರೆ ಕೃಷಿ ವಿಜ್ಞಾನಿಗಳ ತಂಡ ಸ್ಥಳಕ್ಕೆ ಭೇಟಿ ನೀಡಿ ಬೆಳೆ ಪರಿಶೀಲನೆ ನಡೆಸಿ ವರದಿ ನೀಡಲಿದೆ. ನಂತರ ಸರ್ಕಾರದ ಹಂತದಲ್ಲಿ ಸಮಸ್ಯೆ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಲು ಅವಕಾಶವಿದೆ ಎಂದು ತಿಳಿಸಿದರು.

ಮನೆಗಳ ಮೇಲೆ ಹಾದುಹೋಗಿರುವ ವಿದ್ಯುತ್ ತಂತಿ ತೆರವಿಗೆ ಆಗ್ರಹ

ಅಲೆಮಾರಿ ಹಾಗೂ ಅರೆ ಅಲೆಮಾರಿ ಸಂಘದ ಜಿಲ್ಲಾಧ್ಯಕ್ಷ ಹುಲಿಯಪ್ಪ ಮಾತನಾಡಿ, ಬಂಗಾರಪ್ಪನಗುಡ್ಡ ಗ್ರಾಮದಲ್ಲಿ ಅಲೆಮಾರಿ ಸಮುದಾಯದ ಕೆಲವು ಮನೆಗಳ ಮೇಲೆ ವಿದ್ಯುತ್ ತಂತಿಗಳು ಹಾದು ಹೋಗಿವೆ. ಈ ಬಗ್ಗೆ ಹಲವು ಬಾರಿ ಬೆಸ್ಕಾಂ ಅಧಿಕಾರಿಗಳ ಗಮನಕ್ಕೆ ತಂದರೂ ಸಮಸ್ಯೆಗೆ ಪರಿಹಾರ ದೊರೆತಿಲ್ಲ ಎಂದು ದೂರಿದರು.

ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮುದಾಯದ ಮಕ್ಕಳಿಗೆ ವಸತಿ ಶಾಲೆಗಳಲ್ಲಿ ಉಚಿತ ಪ್ರವೇಶ ಕಲ್ಪಿಸಬೇಕು. ಆದರೆ ಹಲವು ಶಾಲೆಗಳಲ್ಲಿ ದಾಖಲಾತಿ ಮಾಡಿಕೊಳ್ಳಲು ಹಿಂದೇಟು ಹಾಕಲಾಗುತ್ತಿದೆ. ವಿದ್ಯಾರ್ಥಿಗಳಿಗೆ ದೊರೆಯಬೇಕಾದ ವಿದ್ಯಾರ್ಥಿವೇತನವೂ ಸಿಗುತ್ತಿಲ್ಲ. ಇದರಿಂದ ಬಡ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದರು.

ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮುದಾಯದ ಸಮಸ್ಯೆಗಳನ್ನು ಆಲಿಸಲು ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ನಡೆಸಬೇಕು ಎಂಬ ಸರ್ಕಾರದ ಸೂಚನೆಯಿದ್ದರೂ ಇದುವರೆಗೆ ಸಮರ್ಪಕವಾಗಿ ಸಭೆಗಳನ್ನು ನಡೆಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇದಕ್ಕೆ ಬೆಸ್ಕಾಂ ಎಇ ಮಲ್ಲಿಕಾರ್ಜುನ್ ಪ್ರತಿಕ್ರಿಯಿಸಿ, ಬಂಗಾರಪ್ಪನಗುಡ್ಡ ಗ್ರಾಮಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ವಿದ್ಯುತ್ ತಂತಿಗಳ ಸಮಸ್ಯೆಯನ್ನು ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಜಯಪ್ಪ ಮಾತನಾಡಿ, ಅಗತ್ಯ ದಾಖಲೆಗಳನ್ನು ಸಲ್ಲಿಸಿದರೆ ನಿಯಮಾನುಸಾರ ವಿದ್ಯಾರ್ಥಿವೇತನ ನೀಡಲಾಗುವುದು. ಯಾವುದೇ ವಿದ್ಯಾರ್ಥಿಯ ಪ್ರಕರಣದಲ್ಲಿ ಸಮಸ್ಯೆ ಇದ್ದರೆ ಪೋಷಕರೊಂದಿಗೆ ಇಲಾಖೆಗೆ ಭೇಟಿ ನೀಡಿದಲ್ಲಿ ಪರಿಶೀಲಿಸಿ ಸಮಸ್ಯೆ ಬಗೆಹರಿಸಲಾಗುವುದು ಎಂದು ತಿಳಿಸಿದರು.

ವಿದ್ಯಾರ್ಥಿನಿಲಯಗಳಲ್ಲಿ ಗುಣಮಟ್ಟದ ಊಟಕ್ಕೆ ಆಗ್ರಹ

ವಾಸುದೇವ ಮೇಟಿ ಬಳಗ ರೈತ ಸಂಘದ ತಾಲೂಕು ಅಧ್ಯಕ್ಷ ಕುಮಾರ್ ಮಾತನಾಡಿ, ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ನಡೆಯುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಮೆನು ಪ್ರಕಾರ ವಿದ್ಯಾರ್ಥಿಗಳಿಗೆ ಊಟ ನೀಡುತ್ತಿಲ್ಲ ಎಂಬ ದೂರುಗಳಿವೆ. ಈ ಕುರಿತು ಈಗಾಗಲೇ ಅಧಿಕಾರಿಗಳ ಗಮನಕ್ಕೆ ತರಲಾಗಿದ್ದು, ವಿದ್ಯಾರ್ಥಿಗಳಿಗೆ ನಿಯಮಾನುಸಾರ ಗುಣಮಟ್ಟದ ಆಹಾರ ಒದಗಿಸಬೇಕು ಎಂದು ಒತ್ತಾಯಿಸಿದರು.

ಪ್ರಚಾರದ ಕೊರತೆ: ಸಾರ್ವಜನಿಕರ ಸಂ–ಖ್ಯೆ ಕಡಿಮೆ



ವಕೀಲ ಆರ್. ಓಬಳೇಶ್ ಮಾತನಾಡಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಆಶಯದಂತೆ ರೈತರು, ಬಡವರು ಹಾಗೂ ಸಾರ್ವಜನಿಕರ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಆಲಿಸಿ ಪರಿಹರಿಸುವ ಉದ್ದೇಶದಿಂದ ಪ್ರಜಾ ಸೇವಾ ಆಂದೋಲನ ಹಮ್ಮಿಕೊಳ್ಳಲಾಗಿದೆ. ಆದ–ರೆ ಕಾರ್ಯಕ್ರಮದ ಕುರಿತು ಸಮರ್ಪಕ ಪ್ರಚಾರದ ಕೊರತೆಯಿಂದಾಗಿ ಹೆಚ್ಚಿನ ಸಂ–ಖ್ಯೆಯ ಸಾರ್ವಜನಿಕರು ಭಾಗವಹಿಸಲು ಸಾಧ್ಯವಾಗಿಲ್ಲ. ಮುಂದಿನ ದಿನಗಳಲ್ಲಿ ಗ್ರಾಮ ಮಟ್ಟದಲ್ಲಿ ವ್ಯಾಪಕ ಪ್ರಚಾರ ಕೈಗೊಂಡು ಸಾರ್ವಜನಿಕರಿಗೆ ಮಾಹಿತಿ ನೀಡಬೇಕು ಎಂದು ಸಲಹೆ ನೀಡಿದರು.

ಸಾರ್ವಜನಿಕ ಅಹವಾಲು ಸ್ವೀಕಾರಕ್ಕೆ ಉತ್ತಮ ವೇದಿಕೆ

ಪ್ರಜಾ ಸೇವಾ ಆಂದೋಲನವು ಸಾರ್ವಜನಿಕರ ಅಹವಾಲುಗಳನ್ನು ನೇರವಾಗಿ ಸ್ವೀಕರಿಸಿ, ಸಂಬಂಧಪಟ್ಟ ಅಧಿಕಾರಿಗಳ ಸಮ್ಮುಖದಲ್ಲಿಯೇ ಸಮಸ್ಯೆಗಳ ಕುರಿತು ಚರ್ಚಿಸಲು ಉತ್ತಮ ವೇದಿಕೆಯಾಗಿದೆ ಎಂದು ತಹಶೀಲ್ದಾರ್ ಗುರುಬಸವರಾಜ್ ಹೇಳಿದರು.

ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಮುಕ್ತವಾಗಿ ಅಧಿಕಾರಿಗಳ ಗಮನಕ್ಕೆ ತರಬೇಕು. ಸಂಬಂಧಪಟ್ಟ ಇಲಾಖೆಗಳ ಮೂಲಕ ನಿಯಮಾನುಸಾರ ಪರಿಹಾರ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಒಟ್ಟು 36 ಅರ್ಜಿಗಳನ್ನು ಸ್ವೀಕರಿಸಲಾಯಿತು.

ಈ ಸಂದರ್ಭದಲ್ಲಿ ಬಿಆರ್‌ಸಿ ಡಿ. ಹಾಲಪ್ಪ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ, ಬೆಸ್ಕಾಂ ಎಇಇ ಮಲ್ಲಿಕಾರ್ಜುನ್ ಸೇರಿದಂತೆ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು, ವಿವಿಧ ಸಂಘ–ಸಂಸ್ಥೆಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

ತಾಯಿಟೋಣಿಯಲ್ಲಿ ಚರಂಡಿ ನೀರು ರಸ್ತೆಗೆ: ಶಾಲಾ ಮಕ್ಕಳ ಪರದಾಟ
ಶಾಶ್ವತ ಚರಂಡಿ ವ್ಯವಸ್ಥೆಗೆ ಗ್ರಾಮಸ್ಥರ ಆಗ್ರಹ

"ಮುಂಜಾನೆಯ ಮೆರಗು"

ಜಗಳೂರು, ಸೆ.26– ತಾಲ್ಲೂಕಿನ ಹಿರೇಮಲ್ಲನಹೊಳೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಾಯಿಟೋಣಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಂಭಾಗ ಚರಂಡಿ ತ್ಯಾಜ್ಯ ನೀರು ರಸ್ತೆಯಲ್ಲೇ ಹರಿಯುತ್ತಿರುವುದರಿಂದ ಶಾಲಾ ಮಕ್ಕಳು ಹಾಗೂ ಸಾರ್ವಜನಿಕರು ಸಂಚಾರಕ್ಕೆ ಪರದಾಡುವಂತಾಗಿದೆ.

ಗ್ರಾಮದ ಮಧ್ಯಭಾಗದಲ್ಲಿರುವ ಸರ್ಕಾರಿ ಶಾಲೆಯ ಮುಂಭಾಗ ಸಮರ್ಪಕ ಚರಂಡಿ ವ್ಯವಸ್ಥೆ ಇಲ್ಲದ ಪರಿಣಾಮ ಮನೆಗಳಿಂದ ಹೊರಬರುವ ಕೊಳಚೆ ನೀರು ರಸ್ತೆಯಲ್ಲೇ ಹರಿಯುತ್ತಿದೆ. ಇದರಿಂದ ರಸ್ತೆಯಲ್ಲಿ ಕೊಳಚೆ ನೀರು ನಿಂತು ದುರ್ವಾಸನೆ ಬೀರುತ್ತಿದ್ದು, ಶಾಲೆಗೆ ತೆರಳುವ ಮಕ್ಕಳು ಇದೇ ನೀರನ್ನು ದಾಟಿಕೊಂಡು ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.

ಮಳೆ ಬಂದರೆ ಮತ್ತಷ್ಟು ಸಂಕಷ್ಟ

ಮಳೆ ಸುರಿದ ಸಂದರ್ಭದಲ್ಲಿ ಸಮಸ್ಯೆ ಮತ್ತಷ್ಟು ಉಲ್ಬಣಗೊಳ್ಳುತ್ತಿದೆ.



ಮಳೆನೀರು ಹಾಗೂ ಕೊಳಚೆ ನೀರು ರಸ್ತೆಯಲ್ಲೇ ಸಂಗ್ರಹವಾಗಿ ಕೆಸರುಮಯವಾಗುವುದರಿಂದ ಪಾದಚಾರಿಗಳು ಮತ್ತು ದ್ವಿಚಕ್ರ ವಾಹನ ಸವಾರರು ಸಂಚರಿಸಲು ತೊಂದರೆ ಅನುಭವಿಸುತ್ತಿದ್ದಾರೆ. ಮಕ್ಕಳು ಚರಂಡಿ ನೀರಿನಲ್ಲಿ ನಡೆದು ಶಾಲೆಗೆ ತೆರಳುವುದರಿಂದ ಅವರ ಉಡುಪು ಹಾಗೂ ಶೂಗಳು ಕೊಳಕಾಗುತ್ತಿವೆ ಎಂದು ಪೋಷಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕೊಳಚೆ ನೀರು ಬಹಳ ದಿನಗಳ ಕಾಲ ನಿಂತಿರುವುದರಿಂದ ಸೊಳ್ಳೆಗಳ ಉತ್ಪತ್ತಿಗೆ ಕಾರಣವಾಗುವ ಸಾಧ್ಯತೆಯಿದ್ದು, ಮಕ್ಕಳ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುವ ಆತಂಕವನ್ನು ಪೋಷಕರು ವ್ಯಕ್ತಪಡಿಸಿದ್ದಾರೆ. ರಸ್ತೆಯಲ್ಲಿ ಜಾರುವ ಪರಿಸ್ಥಿತಿ ನಿರ್ಮಾಣವಾಗಿರುವುದರಿಂದ ದ್ವಿಚಕ್ರ ವಾಹನ ಸವಾರರು ಹಾಗೂ ಪಾದಚಾರಿಗಳಿಗೆ ಅಪಾಯ ಎದುರಾಗುವ ಸಾಧ್ಯತೆಯೂ ಇದೆ.

ಶಾಶ್ವತ ಪರಿಹಾರಕ್ಕೆ ಒತ್ತಾಯ

ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಯನ್ನು ಪರಿಶೀಲಿಸಬೇಕು. ಚರಂಡಿ ನೀರು ರಸ್ತೆಗೆ ಹರಿದುಬರದಂತೆ ಸೂಕ್ತ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಜತೆಗೆ, ಈಗಿರುವ ಚರಂಡಿಯನ್ನು ಸ್ವಚ್ಛಗೊಳಿಸಿ ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಹಾಳಾಗಿರುವ ಚರಂಡಿ ಇದ್ದಲ್ಲಿ ಅದನ್ನು ದುರಸ್ತಿಗೊಳಿಸಿ, ಶಾಲಾ ಮಕ್ಕಳ ಸುರಕ್ಷಿತ ಸಂಚಾರಕ್ಕೆ ಅನುಕೂಲವಾಗುವಂತೆ ರಸ್ತೆ ಬದಿಯಲ್ಲಿ ಸಮರ್ಪಕ ಚರಂಡಿ ವ್ಯವಸ್ಥೆ ಕಲ್ಪಿಸಬೇಕು ಎಂದು ಗ್ರಾಮದ ಹರೀಶ್ ರೆಡ್ಡಿ, ಬಾಬು ಸೇರಿದಂತೆ ಮುಖಂಡರು ಆಗ್ರಹಿಸಿದ್ದಾರೆ.

ಎಸ್‌ಐಆರ್: 931 ಮಂದಿಗೆ ನೋಟಿಸ್; 843 ಜನರ ಮಾಹಿತಿ ಅಪ್‌ಡೇಟ್–88 ಪ್ರಕರಣಗಳು ಬಾಕಿ



"ಮುಂಜಾನೆಯ ಮೆರಗು"

ಜಗಳೂರು, ಸೆ.27– ತಾಲೂಕಿನಾದ್ಯಂತ ಕೈಗೊಳ್ಳಲಾಗಿರುವ ಎಸ್‌ಐಆರ್ ಪ್ರಕ್ರಿಯೆ ಬಹುತೇಕ ಪೂರ್ಣಗೊಂಡಿದ್ದು, ಹಿಯ–ರಿಂಗ್ ಸೇರಿದಂತೆ ದಾಖಲೆಗಳ ಪರಿಶೀಲನಾ ಕಾರ್ಯ ಮುಗಿದಿದೆ. ಇದೀಗ ಸಂಬಂಧಪಟ್ಟ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ದಾಖಲಿಸುವ ಕಾರ್ಯ ಮಾತ್ರ ಬಾಕಿ ಉಳಿದಿದೆ ಎಂದು ತಹಸೀಲ್ದಾರ್ ಗುರುಬಸವರಾಜ್ ತಿಳಿಸಿದರು.

ಶನಿವಾರ ಪಟ್ಟಣದ ತಾಲೂಕು ಕಚೇರಿಯಲ್ಲಿ ಮಾಹಿತಿ ನೀಡಿದ ಅವರು, ಎಸ್‌ಐಆರ್ ಪ್ರಕ್ರಿಯೆಯಡಿ ತಾಲೂಕಿನಲ್ಲಿ ಒಟ್ಟು 931 ಮಂದಿಗೆ ನೋಟಿಸ್ ನೀಡಲಾಗಿತ್ತು. ನೋಟಿಸ್ ನೀಡಿದ ಬಳಿಕ ಸಂಬಂಧಪಟ್ಟವರಿಗೆ ವಿಚಾರಣೆಗೆ ಅವಕಾಶ ಕಲ್ಪಿಸಿ, ಅವರು ಸಲ್ಲಿಸಿದ ದಾಖಲೆಗಳನ್ನು ಪರಿಶೀಲಿಸುವ ಮೂಲಕ ಹಿಯರಿಂಗ್ ಪ್ರಕ್ರಿಯೆಯನ್ನು ಸಂಪೂರ್ಣಗೊಳಿಸಲಾಗಿದೆ ಎಂದರು.

ನೋಟಿಸ್ ಪಡೆದವರ ಪೈಕಿ 843 ಮಂದಿ ತಮ್ಮ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಮಾಹಿತಿಯನ್ನು ಅಪ್‌ಡೇಟ್ ಮಾಡಿಸಿಕೊಂಡಿದ್ದಾರೆ. ಇದರಿಂದ ಬಹುತೇಕ ಪ್ರಕರಣಗಳು ಇತ್ಯರ್ಥಗೊಂಡಿ–ದ್ದು, ಇನ್ನೂ 88 ಮಂದಿಯ ಪ್ರಕರಣಗಳು ಮಾತ್ರ ಬಾಕಿ ಉಳಿದಿವೆ ಎಂದು ಹೇಳಿದರು.

ಬಾಕಿ ಉಳಿದಿರುವ ಪ್ರಕರಣಗಳ ಕುರಿತು ಪರಿಶೀಲನೆ ನಡೆಸಿದಾಗ, ಕೆಲವು ವ್ಯಕ್ತಿಗಳು ಮರಣ ಹೊಂದಿರುವ ಸಾಧ್ಯತೆ, ಕೆಲವರು ಸ್ಥಳಾಂತರಗೊಂಡಿರುವುದು ಅಥವಾ ವಿಚಾರಣೆಗೆ ಹಾಜರಾಗದಿರುವುದು ಕಂಡುಬಂದಿದೆ. ಇನ್ನು ಕೆಲವರು ಯಾವುದೇ ದಾಖಲೆಗಳನ್ನು ಸಲ್ಲಿಸದೆ ಇರುವ ಹಿನ್ನೆಲೆಯಲ್ಲಿ ಅವರ ಪ್ರಕರಣಗಳು ಬಾಕಿ ಉಳಿದಿವೆ. ಈ ಹಿನ್ನೆಲೆಯಲ್ಲಿ ಬಾಕಿ ಪ್ರಕರಣಗಳ ನೈಜ ಸ್ಥಿತಿಗತಿಯನ್ನು ಮತ್ತಷ್ಟು ಪರಿಶೀಲಿಸಲಾಗುತ್ತಿದೆ ಎಂದು ತಿಳಿಸಿದರು.

ದಾಖಲೆಗಳ ಪರಿಶೀಲನೆಗೆ ಆದ್ಯತೆ

ಎಸ್‌ಐಆರ್ ಪ್ರಕ್ರಿಯೆಯಲ್ಲಿ ದಾಖಲೆಗಳ ಪರಿಶೀಲನೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ನೋಟಿಸ್ ಪಡೆದವರು ಸಲ್ಲಿಸಿರುವ ದಾಖಲೆಗಳು ಹಾಗೂ ಲಭ್ಯವಿರುವ ಮಾಹಿತಿಯನ್ನು ಪರಿಶೀಲಿಸಿ, ಅಗತ್ಯವಿರುವ ಕಡೆಗಳಲ್ಲಿ ತಿದ್ದುಪಡಿ ಮತ್ತು ಅಪ್‌ಡೇಟ್ ಮಾಡಲಾಗಿದೆ. ಯಾವುದೇ ಗೊಂದಲ ಅಥವಾ ವ್ಯತ್ಯಾಸ ಕಂಡುಬಂದಲ್ಲಿ ಸಂಬಂಧಪಟ್ಟ ದಾಖಲೆಗಳ ಆಧಾರದ ಮೇಲೆ ಪರಿಶೀಲನೆ ನಡೆಸಲಾಗಿದೆ ಎಂದು ತಹಸೀಲ್ದಾರ್ ವಿವರಿಸಿದರು.

ಹಿಯರಿಂಗ್‌ಗೆ ಹಾಜರಾಗಿರುವ 843 ಮಂದಿಯ ಮಾಹಿತಿಯನ್ನು ಅಪ್‌ಡೇಟ್ ಮಾಡಲಾಗಿದ್ದು, ಸಂಬಂಧಪಟ್ಟ ವಿವರಗಳನ್ನು ಆನ್‌ಲೈನ್ ವ್ಯವಸ್ಥೆಯಲ್ಲಿ ದಾಖಲಿಸುವ ಪ್ರಕ್ರಿಯೆ ಮುಂದುವರಿಯಲಿದೆ. ಆನ್‌ಲೈನ್ ಎಂಟ್ರಿ ಪೂರ್ಣಗೊಂಡ ನಂತರ ಎಸ್‌ಐಆರ್ ಪ್ರಕ್ರಿಯೆಯ ಅಂತಿಮ ಹಂತವೂ ಮುಕ್ತಾಯಗೊಳ್ಳಲಿದೆ ಎಂದು ಹೇಳಿದರು.

88 ಪ್ರಕರಣಗಳ ಮೇಲೆ ನಿಗಾ

ಇನ್ನೂ ಬಾಕಿ ಉಳಿದಿರುವ 88 ಪ್ರಕರಣಗಳ ಕುರಿತು ಅಧಿಕಾರಿಗಳು ವಿಶೇಷ ಗಮನ ಹರಿಸಿದ್ದಾರೆ. ನೋಟಿಸ್ ಪಡೆದವರು ಏಕೆ ಹಾಜರಾಗಿಲ್ಲ, ಅವರು ಸ್ಥಳದಲ್ಲಿದ್ದಾರೆಯೇ, ಮರಣ ಹೊಂದಿದ್ದಾರೆಯೇ ಅಥವಾ ಬೇ–ರೆಡೆಗೆ ಸ್ಥಳಾಂತರಗೊಂಡಿದ್ದಾರೆಯೇ ಎಂಬುದನ್ನು ಪರಿಶೀಲಿಸಲಾಗುತ್ತಿದೆ. ಅಗತ್ಯ ದಾಖಲೆಗಳು ಲಭ್ಯವಾದಲ್ಲಿ ಅವುಗಳನ್ನು ಪಡೆದು ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಹಸೀಲ್ದಾರ್ ಗುರುಬಸವರಾಜ್ ಹೇಳಿದರು.

ವೈಯಕ್ತಿಕ ಕಾರ್ಯದ ನಿಮಿತ್ತ ಜಗಳೂರಿಗೆ ಆಗಮಿಸಿದ ಹರಿಹರ ಮಾಜಿ ಶಾಸಕ ರಾಮಪ್ಪ
ಕೆ.ಪಿ. ಪಾಲಯ್ಯರಿಂದ ಆತ್ಮೀಯ ಸ್ವಾಗತ, ಕಾಂಗ್ರೆಸ್ ಮುಖಂಡರಿಂದ ಕುಶಲೋಪರಿ

"ಮುಂಜಾನೆಯ ಮೆರಗು"

ಜಗಳೂರು, ಸೆ.26– ವೈಯಕ್ತಿಕ ಕಾರ್ಯದ ನಿಮಿತ್ತ ಜಗಳೂರಿಗೆ ಆಗಮಿಸಿದ್ದ ಹರಿಹರ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಶ್ರೀ ರಾಮಪ್ಪ ಅವರನ್ನು ಪಟ್ಟಣದ ಶಾಸಕರ ಜನಸಂಪರ್ಕ ಕಚೇರಿಯಲ್ಲಿ ಜಗಳೂರಿನ ಕಾಂಗ್ರೆಸ್ ಮುಖಂಡ ಹಾಗೂ ಭರವಸೆಯ ನಾಯಕ ಕೆ.ಪಿ. ಪಾಲಯ್ಯ ಅವರು ಆತ್ಮೀಯವಾಗಿ ಸ್ವಾಗತಿಸಿ ಗೌರವಪೂರ್ವಕವಾಗಿ ಬರಮಾಡಿಕೊಂಡರು.

ಮಾಜಿ ಶಾಸಕ ರಾಮಪ್ಪ ಅವರು ಜಗಳೂರಿಗೆ ಆಗಮಿಸಿದ ಸಂದರ್ಭದಲ್ಲಿ ಕೆ.ಪಿ. ಪಾಲಯ್ಯ ಅವರು ಅವರನ್ನು ಆತ್ಮೀಯವಾಗಿ ಭೇಟಿಯಾಗಿ ಸ್ವಾಗತಿಸಿದರು. ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ವಿವಿಧ ಮುಖಂಡರು ಹಾಗೂ ಕಾರ್ಯಕರ್ತರು ರಾಮಪ್ಪ ಅವರನ್ನು ಭೇಟಿಯಾಗಿ ಕುಶಲೋಪರಿ ವಿಚಾರಿಸಿದರು.

ಈ ವೇಳೆ ಮುಖಂಡರ ನಡುವೆ ಸೌಹಾರ್ದಯುತ ಮಾತುಕತೆ ನಡೆಯಿತು. ಪಕ್ಷದ ಸಂಘಟನೆ, ಸ್ಥಳೀಯ ಬೆಳವಣಿಗೆಗಳು ಸೇರಿದಂತೆ ವಿವಿಧ ವಿಚಾರಗಳ ಕುರಿತು ಮುಖಂಡರು ಪರಸ್ಪರ ಚರ್ಚಿಸಿದರು. ಜಗಳೂರು ಹಾಗೂ ಹರಿಹರ ಭಾಗದ ರಾಜಕೀಯ ಮತ್ತು ಸಾಮಾಜಿಕ ಬೆಳವಣಿಗೆಗಳ ಬಗ್ಗೆಯೂ ವಿಚಾರ ವಿನಿಮಯ ನಡೆಯಿತು.

ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ



ಕಾರ್ಯಕರ್ತರೊಂದಿಗೆ ಆತ್ಮೀಯವಾಗಿ ಬೆರೆತ ಮಾಜಿ ಶಾಸಕ ರಾಮಪ್ಪ ಅವರು, ಜಗಳೂರಿನ ಮುಖಂಡರು ನೀಡಿದ ಆತ್ಮೀಯ ಸ್ವಾಗತಕ್ಕೆ ಕೃತಜ್ಞತೆ ವ್ಯಕ್ತಪಡಿಸ